ಸಂಪುಟ : 11 ಸಂಚಿಕೆ : 142 ಪುಟ : 4+2 ಬೆಲೆ : 3.00 ಬುಧವಾರ ಜುಲೈ 8, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA ಕನ್ನಡ ದಿನಪತ್ರಿಕೆ




Volume : 11 Issue : 142 Pages : 4+2 Rate : 3.00 Wednesday July 8, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

## ಜುಲೈ 9ರಂದು ನೇರ ಸಂದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜುಲೈ 9ರಂದು ಬೆಳಿಗ್ಗೆ 10 ಗಂಟೆಗೆ ನಗರದ ವಿವೇಕಾನಂದ ನಗರದ 4ನೇ ಅಡ್ಡರಸ್ತೆಯ ಸಾಯಿಬಾಬಾ ದೇವಸ್ಥಾನದ ಹಿಂಭಾಗದ ಕೆಎಚ್‌ಬಿ ಕಾಲೋನಿಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ.

ಈ ಸಂದರ್ಶನದಲ್ಲಿ ಗದಗದ ಸ್ವತಂತ್ರ ಮೈಕ್ರೋಫಿನ್ ಪ್ರೈವೇಟ್ ಲಿಮಿಟೆಡ್ ಕಂಪನಿ ಭಾಗವಹಿಸಲಿದ್ದು, ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಹಾಗೂ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಭಾಗವಹಿಸಬಹುದು. 18ರಿಂದ 30 ವರ್ಷದೊಳಗಿನ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ.

ಶಿರಹಟ್ಟಿ, ಮುಂಡರಗಿ, ಅಣ್ಣಿಗೇರಿ ಹಾಗೂ ಬೆಟಗೇರಿ ಪ್ರದೇಶಗಳಲ್ಲಿ ಖಾಲಿ ಹುದ್ದೆಗಳಿದ್ದು, ಅಭ್ಯರ್ಥಿಗಳು ಕಡ್ಡಾಯವಾಗಿ ಚಾಲನಾ ಪರವಾನಗಿ ಮತ್ತು ದ್ವಿಚಕ್ರ ವಾಹನ ಹೊಂದಿರಬೇಕು.

ಸಂದರ್ಶನಕ್ಕೆ ಆಗಮಿಸುವ ಅಭ್ಯರ್ಥಿಗಳು ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು, ಎರಡು ಬಯೋಡಾಟಾ (ರೆಸ್ಯೂಮೆ), ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿದೆ.

ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಈ ನೇರ ಸಂದರ್ಶನದಲ್ಲಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ 8951460061 ಹಾಗೂ 6363330688 ಸಂಖ್ಯೆಗೆ ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯನ್ನು ಸಂಪರ್ಕಿಸಬಹುದು.

### ಕೊಕ್ಕರಗುಂದಿ–ಬಾಳೆಹೊಸೂರು ಸಂಪರ್ಕ ರಸ್ತೆ ದುಸ್ಥಿತಿ–ತನಿಖೆ ನಡೆಸಿ ಕಾಮಗಾರಿ ಪೂರ್ಣಗೊಳಿಸಲು ಗ್ರಾಮಸ್ಥರ ಆಗ್ರಹ

# 7 ಕೋಟಿ ರೂ. ರಸ್ತೆ ಅರ್ಧಕ್ಕೆ ನಿಂತು ಮೂರು ವರ್ಷ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ/ಗದಗ**

ಅಭಿವೃದ್ಧಿಯ ಹೆಸರಿನಲ್ಲಿ ಕೋಟಿ ಕೋಟಿ ರೂಪಾಯಿ ಅನುದಾನ ಬಿಡುಗಡೆಯಾದರೂ, ಜನರಿಗೆ ಅದರ ಪ್ರಯೋಜನ ಸಿಗದ ಮತ್ತೊಂದು ಪ್ರಕರಣ ಗದಗ ಜಿಲ್ಲೆಯಲ್ಲಿ ಬೆಳಕಿಗೆ ಬಂದಿದೆ. ಶಿರಹಟ್ಟಿ ತಾಲೂಕಿನ ಕೊಕ್ಕರಗುಂದಿ–ಬಾಳೆಹೊಸೂರು ಸಂಪರ್ಕ ರಸ್ತೆ ಅಭಿವೃದ್ಧಿಗೆ ಸುಮಾರು ರೂ.7 ಕೋಟಿ ಅನುದಾನ ಬಿಡುಗಡೆಯಾಗಿದ್ದರೂ, ಕಾಮಗಾರಿ ಆರಂಭಿಸಿ ಮೂರು ವರ್ಷಗಳಾದರೂ ಪೂರ್ಣಗೊಂಡಿಲ್ಲ. ಗುತ್ತಿಗೆದಾರರು ಜಲ್ಲಿಕಲ್ಲು ಹಾಕಿ ಕಾಮಗಾರಿಯನ್ನು ಅರ್ಧಕ್ಕೆ ಬಿಟ್ಟು ನಾಪತ್ತೆಯಾಗಿದ್ದು, ನಿತ್ಯ ಸಾವಿರಾರು ಜನರು, ರೈತರು ಹಾಗೂ ವಿದ್ಯಾರ್ಥಿಗಳು ಜೀವ ಕೈಯಲ್ಲಿ ಹಿಡಿದು ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ರಸ್ತೆ ಕೊಕ್ಕರಗುಂದಿ ಗ್ರಾಮವನ್ನು ಬಾಳೆಹೊಸೂರಿಗೆ ಸಂಪರ್ಕಿಸುವ ಪ್ರಮುಖ ಮಾರ್ಗವಾಗಿದೆ. ಗ್ರಾಮಸ್ಥರು ಬ್ಯಾಂಕ್, ಸರ್ಕಾರಿ ಕಚೇರಿ, ಆಸ್ಪತ್ರೆ, ಶಾಲೆ–ಕಾಲೇಜು, ಕೃಷಿ ಮಾರುಕಟ್ಟೆ ಸೇರಿದಂತೆ ಬಹುತೇಕ ದೈನಂದಿನ ಅಗತ್ಯಗಳಿಗಾಗಿ ಬಾಳೆಹೊಸೂರನ್ನೇ ಅವಲಂಬಿಸಿದ್ದಾರೆ. ಆದರೆ ಅಪೂರ್ಣ ಕಾಮಗಾರಿಯಿಂದ ರಸ್ತೆ ಸಂಪೂರ್ಣ ಹಾಳಾಗಿದ್ದು, ವಾಹನ ಸವಾರರು ಪ್ರತಿದಿನ ಸಂಕಷ್ಟ ಅನುಭವಿಸುತ್ತಿದ್ದಾರೆ.

ಗ್ರಾಮಸ್ಥರ ಮಾಹಿತಿ ಪ್ರಕಾರ, ಹಿಂದಿನ ಶಾಸಕ ರಾಮಣ್ಣ ಲಮಾಣಿ ಅವರ ಅವಧಿಯಲ್ಲಿ ಗ್ರಾಮಸ್ಥರ ನಿರಂತರ ಹೋರಾಟದ ಫಲವಾಗಿ ಪಂಚಾಯತ್ ರಾಜ್ ಇಲಾಖೆಯಿಂದ ಸುಮಾರು ರೂ.7 ಕೋಟಿ ಅನುದಾನ ಬಿಡುಗಡೆಯಾಗಿತ್ತು. ಗುತ್ತಿಗೆದಾರರು ಸುಮಾರು ಐದು ಕಿಲೋಮೀಟರ್‌ವರೆಗೆ ಜಲ್ಲಿಕಲ್ಲು ಹಾಕಿದ ಬಳಿಕ ಕಾಮಗಾರಿ ಸ್ಥಗಿತಗೊಳಿಸಿದ್ದು, ಕಳೆದ ಮೂರು ವರ್ಷಗಳಿಂದ ಯಾವುದೇ ಕೆಲಸ ನಡೆದಿಲ್ಲ. ರಸ್ತೆ ಬದಿಯಲ್ಲಿ ಗಿಡಗಂಟಿಗಳು ಬೆಳೆದಿದ್ದು, ಮಳೆ ಬಂದರೆ ಕೆಸರು, ಬಿಸಿಲಾದರೆ ಧೂಳಿನ ಕಾಟದಿಂದ ಜನರ ಸಂಚಾರ ದುಸ್ತರವಾಗಿದೆ.





> "ರಸ್ತೆ ಕಾಮಗಾರಿ ಪೂರ್ಣಗೊಳಿಸುವಂತೆ ಶಾಸಕ ಡಾ. ಚಂದ್ರು ಲಮಾಣಿ, ಪಂಚಾಯತ್ ರಾಜ್ ಇಲಾಖೆ ಹಾಗೂ ಜಿಲ್ಲಾಧಿಕಾರಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದೇವೆ. ಆದರೆ ಯಾರೂ ಸ್ಪಂದಿಸುತ್ತಿಲ್ಲ. ಗುತ್ತಿಗೆದಾರನ ವಿರುದ್ಧ ಕ್ರಮ ಜರುಗಿಸಿ, ಕಾಮಗಾರಿ ತಕ್ಷಣ ಪೂರ್ಣಗೊಳಿಸಬೇಕು. ಈ ಕಾಮಗಾರಿಯಲ್ಲಿ ಭ್ರಷ್ಟಾಚಾರ ನಡೆದಿದೆಯೇ ಎಂಬುದನ್ನು ಸರ್ಕಾರ ತನಿಖೆ ನಡೆಸಬೇಕು."
>
> – ಫಕೀರೇಶ, ವಸಂತಗೌಡ ಪಾಟೀಲ ಹಾಗೂ ಗ್ರಾಮಸ್ಥರು

ರಸ್ತೆಯ ದುಸ್ಥಿತಿಯಿಂದ ರೈತರು ಕೃಷಿ ಉತ್ಪನ್ನಗಳನ್ನು ಸಾಗಿಸಲು ಪರದಾಡುತ್ತಿದ್ದಾರೆ. ಆಂಬುಲೆನ್ಸ್ ಸೇರಿದಂತೆ ತುರ್ತು ಸೇವೆಗಳ ವಾಹನಗಳಿಗೂ ಈ ರಸ್ತೆಯಲ್ಲಿ ಸಂಚರಿಸುವುದು ಕಷ್ಟವಾಗಿದೆ. ಶಾಲಾ ಮಕ್ಕಳು ಹಾಗೂ ದ್ವಿಚಕ್ರ ವಾಹನ ಸವಾರರು ಅಪಘಾತದ ಭೀತಿಯಲ್ಲೇ ಓಡಾಡಬೇಕಾದ ಸ್ಥಿತಿ ನಿರ್ಮಾಣವಾಗಿದೆ.

ಗ್ರಾಮಸ್ಥರು ಈಗಿನ ಶಾಸಕ ಡಾ. ಚಂದ್ರು ಲಮಾಣಿ ಅವರ ಗಮನಕ್ಕೂ ಸಮಸ್ಯೆ ತಂದಿದ್ದರೂ ಯಾವುದೇ ಸ್ಪಂದನೆ ದೊರೆತಿಲ್ಲ ಎಂದು ಆರೋಪಿಸಿದ್ದಾರೆ. ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ಗುತ್ತಿಗೆದಾರರ ಬೇಜವಾಬ್ದಾರಿಯಿಂದ ಅಭಿವೃದ್ಧಿ ಕಾಮಗಾರಿ ಅಪೂರ್ಣವಾಗಿದ್ದು, ಸಾರ್ವಜನಿಕ ಹಣ ವ್ಯರ್ಥವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಸ್ತೆ ಕಾಮಗಾರಿ ವಿಳಂಬದ ಕುರಿತು ಸಮಗ್ರ ತನಿಖೆ ನಡೆಸಿ, ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಂಡು ಕಾಮಗಾರಿ ಶೀಘ್ರ ಪೂರ್ಣಗೊಳಿಸಬೇಕು. ಇಲ್ಲವಾದರೆ ಉಗ್ರ ಹೋರಾಟ ಆರಂಭಿಸುವುದಾಗಿ ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

ಈಗಾಗಲೇ ಕೋಟ್ಯಂತರ ರೂಪಾಯಿ ವೆಚ್ಚವಾಗಿದ್ದರೂ ರಸ್ತೆ ಜನರ ಬಳಕೆಗೆ ಬರದಿರುವುದು ಆಡಳಿತದ ಕಾರ್ಯವೈಖರಿಯ ಮೇಲೆಯೇ ಪ್ರಶ್ನೆ ಎಬ್ಬಿಸಿದೆ. ಗ್ರಾಮಸ್ಥರ ಆಕ್ರೋಶಕ್ಕೆ ಜಿಲ್ಲಾಡಳಿತ ಯಾವ ರೀತಿಯಲ್ಲಿ ಸ್ಪಂದಿಸುತ್ತದೆ ಎಂಬುದು ಕಾದು ನೋಡಬೇಕಾಗಿದೆ.

### ಅಗಡಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ 'ಟೆಕ್–ಟು–ಕಾರ್ಪೊರೇಟ್–2026' ಕಾರ್ಯಕ್ರಮ

# ಟೆಕ್‌ನಿಂದ ಕಾರ್ಪೊರೇಟ್‌ಗೆ ಯಶಸ್ಸಿನ ಪಯಣ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಉದ್ಯೋಗ ಕ್ಷೇತ್ರದ ಸವಾಲುಗಳನ್ನು ಯಶಸ್ವಿಯಾಗಿ ಎದುರಿಸಲು ವಿದ್ಯಾರ್ಥಿಗಳು ತಾಂತ್ರಿಕ ಜ್ಞಾನದ ಜೊತೆಗೆ ಸಂವಹನ ಕೌಶಲ್ಯ, ಸಮಸ್ಯೆ ಪರಿಹಾರ ಸಾಮರ್ಥ್ಯ ಹಾಗೂ ಆತ್ಮವಿಶ್ವಾಸವನ್ನು ಬೆಳೆಸಿಕೊಳ್ಳಬೇಕು ಎಂದು ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್ (ಟಿಸಿಎಸ್) ಸಂಸ್ಥೆಯ ಪ್ರಾದೇಶಿಕ ಪ್ರತಿಭಾ ನೇಮಕಾತಿ ವಿಭಾಗದ ಮುಖ್ಯಸ್ಥ ಕಿರಣ್ ಕುಮಾರ್ ಹೇಳಿದರು.

ಪಟ್ಟಣದ ಶ್ರೀ ವೆಂಕಪ್ಪ ಎಂ. ಅಗಡಿ ಮತ್ತು ಶ್ರೀಮತಿ ಕಮಲಾ ವೆಂ. ಅಗಡಿ ತಾಂತ್ರಿಕ ಮಹಾವಿದ್ಯಾಲಯದ ತರಬೇತಿ ಮತ್ತು ಉದ್ಯೋಗ ನಿಯೋಜನಾ ವಿಭಾಗ ಆಯೋಜಿಸಿದ್ದ 'ಟೆಕ್–ಟು–ಕಾರ್ಪೊರೇಟ್ 2026' ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ನೇಮಕಾತಿ ಪ್ರಕ್ರಿಯೆಯಲ್ಲಿ ಯಶಸ್ಸು ಸಾಧಿಸಲು ವಿದ್ಯಾರ್ಥಿಗಳು ಸಂದರ್ಶನಕ್ಕೆ ಸಮರ್ಪಕ ಸಿದ್ಧತೆ ಮಾಡಿಕೊಳ್ಳಬೇಕು. ಸ್ಪರ್ಧಾತ್ಮಕ ಜಗತ್ತಿನಲ್ಲಿ ನಿರಂತರ ಕಲಿಕೆ ಮತ್ತು ಕೌಶಲ್ಯ ವೃದ್ಧಿಯೇ ಯಶಸ್ಸಿನ ಮಂತ್ರ ಎಂದು ತಿಳಿಸಿದರು.

> "ತಾಂತ್ರಿಕ ಜ್ಞಾನದ ಜೊತೆಗೆ ಕೌಶಲ್ಯ, ಆತ್ಮವಿಶ್ವಾಸ ಮತ್ತು ಉತ್ತಮ ಸಂವಹನ ಸಾಮರ್ಥ್ಯ ಹೊಂದಿದ ವಿದ್ಯಾರ್ಥಿಗಳೇ ಕಾರ್ಪೊರೇಟ್ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಬಲ್ಲರು."
>
> – ಕಿರಣ್ ಕುಮಾರ್, ಟಿಸಿಎಸ್

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಪರಶುರಾಮ ಬಾರ್ಕಿ ವಹಿಸಿದ್ದರು. ಡೀನ್‌ಗಳು, ವಿವಿಧ ವಿಭಾಗಗಳ ಮುಖ್ಯಸ್ಥರು, ತರಬೇತಿ ಮತ್ತು ಉದ್ಯೋಗ ನಿಯೋಜನಾ ವಿಭಾಗದ ಸಂಯೋಜಕರು, ಬೋಧಕ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮಹಾವಿದ್ಯಾಲಯದ ವಿವಿಧ ವಿಭಾಗಗಳಿಂದ 28 ತಂಡಗಳು ಭಾಗವಹಿಸಿ, ಕೈಗಾರಿಕಾ ಕ್ಷೇತ್ರದ ಸಮಸ್ಯೆಗಳಿಗೆ ನವೀನ ಮತ್ತು ಪ್ರಾಯೋಗಿಕ ಪರಿಹಾರಗಳನ್ನು ಪ್ರಸ್ತುತಪಡಿಸಿದವು. ವಿದ್ಯಾರ್ಥಿಗಳ ಸೃಜನಶೀಲತೆ, ತಂಡದ ಕಾರ್ಯಪದ್ಧತಿ, ಸಂವಹನ ಕೌಶಲ್ಯ ಹಾಗೂ ಸಮಸ್ಯೆ ಪರಿಹಾರ ಸಾಮರ್ಥ್ಯವನ್ನು ಮೌಲ್ಯಮಾಪನ ಮಾಡಲಾಯಿತು.

ಗದಗ–ಬೆಟಗೇರಿ ಲಯನ್ಸ್ ಕ್ಲಬ್‌ನ 2026–27ನೇ ಸಾಲಿನ ನೂತನ ಅಧ್ಯಕ್ಷರಾಗಿ ಪ್ರವೀಣ ವಾರಕರ ಹಾಗೂ ಕಾರ್ಯದರ್ಶಿಯಾಗಿ ಲಿಂಗರಾಜ ತೋಟದ ಆಯ್ಕೆಯಾಗಿದ್ದಾರೆ.

ಉಪಾಧ್ಯಕ್ಷರಾಗಿ ಡಾ. ನವೀನ ಹಿರೇಗೌಡರ ಮತ್ತು ರಾಜಣ್ಣ ಮಲ್ಲಾಡದ, ಸಹ ಕಾರ್ಯದರ್ಶಿಯಾಗಿ ರೇಣುಕಪ್ರಸಾದ ಹಿರೇಮಠ, ಖಜಾಂಚಿಯಾಗಿ ರೇಣುಕಪ್ರಸಾದ ಶಿಗ್ಲಿಮಠ ಆಯ್ಕೆಯಾಗಿದ್ದಾರೆ.

ಲಯನ್ಸ್ ಕ್ಲಬ್‌ನ ಮಹಿಳಾ ಘಟಕದ ಅಧ್ಯಕ್ಷೆಯಾಗಿ ಅಮೃತಾ ವಾರಕರ, ಕಾರ್ಯದರ್ಶಿಯಾಗಿ ಅಪರ್ಣಾ ತೋಟದ ಹಾಗೂ ಖಜಾಂಚಿಯಾಗಿ ಪ್ರಿಯಾ ಶಿಗ್ಲಿಮಠ ಆಯ್ಕೆಯಾಗಿದ್ದಾರೆ.

ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವು ಜುಲೈ 9ರಂದು ಗುರುವಾರ ಸಂಜೆ 7 ಗಂಟೆಗೆ ಮುಂಡರಗಿ ರಸ್ತೆಯ ಲಯನ್ಸ್ ಶಾಲೆಯ ಸಭಾಂಗಣದಲ್ಲಿ ನಡೆಯಲಿದೆ. ಲಯನ್ಸ್ ಕ್ಲಬ್‌ನ ದ್ವಿತೀಯ ಉಪ ಜಿಲ್ಲಾ ಗವರ್ನರ್ ಗವಿಸಿದ್ದಪ್ಪ ಮುದ್ಗಲ್ ಪದಗ್ರಹಣ ನೆರವೇರಿಸಲಿದ್ದು, ನಿಕಟಪೂರ್ವ ಜಿಲ್ಲಾ ಗವರ್ನರ್ ಆನಂತ ಪೋತ್ನೀಸ್ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

### ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಅಕ್ಕಿಗುಂದದ ಶ್ರೀ ವೀರಭದ್ರೇಶ್ವರ ದೇವಸ್ಥಾನಕ್ಕೆ ಅನುದಾನ

# ದೇವಸ್ಥಾನ ಜೀರ್ಣೋದ್ಧಾರಕ್ಕೆ ರೂ.2 ಲಕ್ಷ ನೆರವು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಗೊಜನೂರು ವಲಯದ ಅಕ್ಕಿಗುಂದ ಗ್ರಾಮದ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಕಾಮಗಾರಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ರೂ.2 ಲಕ್ಷ ಅನುದಾನ ಮಂಜೂರಾಗಿದ್ದು, ಚೆಕ್ ವಿತರಣಾ ಕಾರ್ಯಕ್ರಮ ಮಂಗಳವಾರ ನಡೆಯಿತು.

ಗದಗ ಜಿಲ್ಲಾ ನಿರ್ದೇಶಕ ಕೇಶವ ದೇವಾಂಗ ದೇವಸ್ಥಾನ ಸಮಿತಿಗೆ ಚೆಕ್ ಹಸ್ತಾಂತರಿಸಿ ಮಾತನಾಡಿ, ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರ ಮಾರ್ಗದರ್ಶನದಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರ, ಕೆರೆ ಹೂಳೆತ್ತುವಿಕೆ, ಶುದ್ಧ ಕುಡಿಯುವ ನೀರಿನ ಯೋಜನೆ, ನಿರ್ಗತಿಕರಿಗೆ ಮನೆ ನಿರ್ಮಾಣ ಸೇರಿದಂತೆ ಹಲವು ಸಮಾಜಮುಖಿ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆಯುತ್ತಿವೆ. ಅಕ್ಕಿಗುಂದದ ದೇವಸ್ಥಾನ ಜೀರ್ಣೋದ್ಧಾರಕ್ಕೂ ನೀಡಿರುವ ಈ ಅನುದಾನವನ್ನು ಸದ್ಬಳಕೆ ಮಾಡಿಕೊಂಡು ಸುಂದರ ದೇವಾಲಯ ನಿರ್ಮಿಸಬೇಕು ಎಂದು ತಿಳಿಸಿದರು.

> "ದೇವಸ್ಥಾನಗಳ ಜೀರ್ಣೋದ್ಧಾರವೂ ಸಮಾಜಮುಖಿ ಸೇವೆಯ ಒಂದು ಭಾಗವಾಗಿದ್ದು, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಈ ಕಾರ್ಯಕ್ಕೆ ನಿರಂತರ ಬೆಂಬಲ ನೀಡುತ್ತಿದೆ."
>
> – ಕೇಶವ ದೇವಾಂಗ ಜಿಲ್ಲಾ ನಿರ್ದೇಶಕರು

ಕಾರ್ಯಕ್ರಮದಲ್ಲಿ ದೇವಸ್ಥಾನ ಸಮಿತಿ ಅಧ್ಯಕ್ಷ ಶಿವಣ್ಣದಯ್ಯ ಶಂಕಿನಮಠ, ಉಪಾಧ್ಯಕ್ಷ ನೀಲಪ್ಪ ಪಣಿ, ತಾಲೂಕು ಯೋಜನಾಧಿಕಾರಿ ಪುನೀತ್ ಓಲೇಕಾರ್, ಸಮಿತಿ ಸದಸ್ಯರಾದ ಬಸಯ್ಯ ಮಲಿಮಠ, ಬಸವಣ್ಣೆಪ್ಪ ತೋಟದ, ಶಂಕ್ರಪ್ಪ ಬೆಂತೂರು, ವೀರಭದ್ರಯ್ಯ ಪೂಜಾರ, ಶೇಖಪ್ಪ ಬಟ್ಟೂರು, ವೆಂಕಪ್ಪ ಲಮಾಣಿ, ಶರಣಯ್ಯ ಹಿರೇಮಠ, ವಲಯದ ಮೇಲ್ವಿಚಾರಕಿ ಗಂಗೋತ್ರಿ ಗೌಡ, ಸೇವಾ ಪ್ರತಿನಿಧಿಗಳು ಹಾಗೂ ಸ್ವಸಹಾಯ ಸಂಘದ ಸದಸ್ಯರು ಉಪಸ್ಥಿತರಿದ್ದರು.

# 25 ವರ್ಷಗಳ ಸೇವೆಗೆ ಬೆಳ್ಳಿ ಪದಕ; ಪರಶುರಾಮ ಲಮಾಣಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಕೆಎಸ್‌ಆರ್‌ಟಿಸಿ ಗದಗ ಡಿಪೋದಲ್ಲಿ 25 ವರ್ಷಗಳ ಕಾಲ ಚಾಲಕರಾಗಿ ಪ್ರಾಮಾಣಿಕ ಸೇವೆ ಸಲ್ಲಿಸಿ ಬೆಳ್ಳಿ ಪದಕ ಪ್ರಶಸ್ತಿ ಪಡೆದಿರುವ ಪರಶುರಾಮ ಚಂದಪ್ಪ ಲಮಾಣಿ ಅವರು ಜೂನ್ 30ರಂದು ಸೇವಾ ನಿವೃತ್ತಿ ಹೊಂದಿದ ಹಿನ್ನೆಲೆಯಲ್ಲಿ ಕಳಸಾಪೂರ ಗ್ರಾಮದಲ್ಲಿ ಆತ್ಮೀಯ ಸನ್ಮಾನ ಕಾರ್ಯಕ್ರಮ ನಡೆಯಿತು.

ಕಳಸಾಪೂರ ಗ್ರಾಮದ ಎಸಿಎಂ ಗಾರ್ಮೆಂಟ್ಸ್ ಮಾಲೀಕರಾದ ಅಶೋಕ ರಾಠೋಡ, ಸಂಗೀತಾ ರಾಠೋಡ ಹಾಗೂ ಶಾಂತಾ ರಾಠೋಡ ಅವರ ನೇತೃತ್ವದಲ್ಲಿ ಪರಶುರಾಮ ಲಮಾಣಿ ಹಾಗೂ ಅವರ ಪತ್ನಿಯನ್ನು ಸನ್ಮಾನಿಸಿ, ಅವರ ದೀರ್ಘಕಾಲದ ಸೇವೆ, ಕರ್ತವ್ಯನಿಷ್ಠೆ ಮತ್ತು ಪ್ರಾಮಾಣಿಕತೆಗೆ ಅಭಿನಂದನೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಸುರೇಶ ಚಂದಪ್ಪ ಲಮಾಣಿ, ಲಕ್ಷ್ಮಣ ರಾಠೋಡ, ಶಂಕರಪ್ಪ ರಾಠೋಡ, ರಮೇಶ ಚವ್ಹಾಣ ಸೇರಿದಂತೆ ಎಸಿಎಂ ಗಾರ್ಮೆಂಟ್ಸ್‌ನ ಸಿಬ್ಬಂದಿ ಹಾಗೂ ಕಾರ್ಮಿಕರು ಉಪಸ್ಥಿತರಿದ್ದು, ಸೇವಾ ನಿವೃತ್ತ ಜೀವನ ಸುಖ–ಶಾಂತಿಯಿಂದ ಕೂಡಿರಲಿ ಎಂದು ಶುಭ ಹಾರೈಸಿದ್ದಾರೆ ಎಂದು ಮಹಾಂತೇಶ ರಾಠೋಡ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗವಾಯಿಗಳ ಜಾತ್ರೆಯಲ್ಲಿ ಸಂಗೀತಾ ಕಟ್ಟಿ ಅವರ ಮನಮೋಹಕ ಗಾಯನಕ್ಕೆ ಮನಸೋತ ಭಕ್ತರು

**ವಿಜಯಸಾಕ್ಷಿ ಸುದ್ದಿ, ಗದಗ**

ಪರಮಪೂಜ್ಯ ಗಾನಯೋಗಿ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 82ನೇ ಹಾಗೂ ಪದ್ಮಭೂಷಣ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 16ನೇ ಪುಣ್ಯಸ್ಮರಣೋತ್ಸವ ಮತ್ತು ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಅಂತರರಾಷ್ಟ್ರೀಯ ಖ್ಯಾತಿಯ ಗಾಯಕಿ ಸಂಗೀತಾ ಕಟ್ಟಿ ಕುಲಕರ್ಣಿ ಅವರು ಮನಮೋಹಕ ಗಾಯನದ ಮೂಲಕ ಭಕ್ತರು ಹಾಗೂ ಸಂಗೀತಾಭಿಮಾನಿಗಳನ್ನು ರಂಜಿಸಿದರು.



ಅವರ ಸುಮಧುರ ಕಂಠದಿಂದ ಮೂಡಿಬಂದ ಭಕ್ತಿಗೀತೆಗಳು ಮತ್ತು ಶಾಸ್ತ್ರೀಯ ಸಂಗೀತದ ಗಾಯನಕ್ಕೆ ಸಭಾಂಗಣದಲ್ಲಿದ್ದ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮವು ಜಾತ್ರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾಗಿ ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ಪುಟ್ಟರಾಜ ಗವಾಯಿಗಳ ಮಠದ ಪರವಾಗಿ ಪುಷ್ಪಾ ಹಿಟ್ನಾಳ ಅವರು ಸಂಗೀತಾ ಕಟ್ಟಿ ಕುಲಕರ್ಣಿ ಅವರನ್ನು ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಜಂಗಿ ಕುಸ್ತಿಗೆ ಭರ್ಜರಿ ಚಾಲನೆ ನೀಡಿದ ಕಲ್ಲಯ್ಯಜ್ಜನವರು

# ಗ್ರಾಮೀಣ ಕ್ರೀಡಾ ಪರಂಪರೆ ಉಳಿಯಬೇಕು



**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಸೊಗಡಿನ ಪ್ರತೀಕವಾಗಿರುವ ಕುಸ್ತಿ ಕಲೆ ದೈಹಿಕ ಹಾಗೂ ಮಾನಸಿಕ ಸದೃಢತೆಯನ್ನು ಬೆಳೆಸುವ ಶ್ರೇಷ್ಠ ಕ್ರೀಡೆಯಾಗಿದ್ದು, ಅದನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯ ಕಲ್ಲಯ್ಯಜ್ಜನವರು ಹೇಳಿದರು.

> "ಕುಸ್ತಿ ಕೇವಲ ಕ್ರೀಡೆಯಲ್ಲ, ಅದು ಶಿಸ್ತು, ಧೈರ್ಯ, ಆರೋಗ್ಯ ಮತ್ತು ಗ್ರಾಮೀಣ ಸಂಸ್ಕೃತಿಯ ಜೀವಂತ ಪರಂಪರೆಯಾಗಿದೆ."
> – ಕಲ್ಲಯ್ಯಜ್ಜನವರು

ನಗರದ ವೀರೇಶ್ವರ ಪುಣ್ಯಾಶ್ರಮದ ಸಮೀಪದ ಕುಸ್ತಿ ಮೈದಾನದಲ್ಲಿ ಪೂಜ್ಯ ಪಂಚಾಕ್ಷರಿ ಗವಾಯಿಗಳವರ ಹಾಗೂ ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಪುಣ್ಯಸ್ಮರಣೋತ್ಸವ ಮತ್ತು ಉಭಯ ಗುರುಗಳ ಜಾತ್ರಾ ಮಹೋತ್ಸವ ಅಂಗವಾಗಿ ಗದಗ-ಬೆಟಗೇರಿ ಜನರಲ್ ವರ್ಕರ್ಸ್ ಹಮಾಲರು ಹಾಗೂ ಚಕ್ಕಡಿಯವರ ಸಮಿತಿ ಆಯೋಜಿಸಿದ್ದ ರಾಷ್ಟ್ರಮಟ್ಟದ ಜಂಗಿ ನಿಖಾಲಿ ಕುಸ್ತಿ ಪಂದ್ಯಾವಳಿಗೆ ಇಬ್ಬರು ಕುಸ್ತಿಪಟುಗಳನ್ನು ಕಣಕ್ಕಿಳಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಕುಸ್ತಿ ಕೇವಲ ಕ್ರೀಡೆಯಲ್ಲ, ಅದು ಶಿಸ್ತು, ಧೈರ್ಯ, ಆತ್ಮವಿಶ್ವಾಸ ಹಾಗೂ ಆರೋಗ್ಯಕರ ಜೀವನಶೈಲಿಯನ್ನು ಬೆಳೆಸುವ ಸಂಸ್ಕೃತಿಯ ಭಾಗವಾಗಿದೆ. ಇಂತಹ ಪಂದ್ಯಾವಳಿಗಳು ಯುವಜನರಲ್ಲಿ ಕ್ರೀಡಾಸಕ್ತಿಯನ್ನು ಹೆಚ್ಚಿಸಿ, ಗ್ರಾಮೀಣ ಕ್ರೀಡೆಗಳಿಗೆ ಹೊಸ ಜೀವ ತುಂಬುತ್ತವೆ ಎಂದು ಹೇಳಿದರು.

ಸಮಿತಿಯ ಅಧ್ಯಕ್ಷ ಆದಪ್ಪ ಮಾರೆಪ್ಪನವರ ಮಾತನಾಡಿ, ಪ್ರತಿ ವರ್ಷದಂತೆ ಈ ಬಾರಿಯೂ ರಾಷ್ಟ್ರಮಟ್ಟದ ಕುಸ್ತಿ ಪಂದ್ಯಾವಳಿಯನ್ನು ಅಚ್ಚುಕಟ್ಟಾಗಿ ಆಯೋಜಿಸಲಾಗಿದ್ದು, ರಾಜ್ಯದ ವಿವಿಧ ಜಿಲ್ಲೆಗಳಿಂದ ಹೆಸರಾಂತ ಕುಸ್ತಿಪಟುಗಳು ಪಾಲ್ಗೊಂಡಿರುವುದು ವಿಶೇಷ ಎಂದು ತಿಳಿಸಿದರು.

ಪಂದ್ಯಾವಳಿಯ ಯಶಸ್ಸಿಗೆ ಸಮಿತಿಯ ಅಧ್ಯಕ್ಷ ಆದಪ್ಪ ಮಾರೆಪ್ಪನವರ, ಉಪಾಧ್ಯಕ್ಷ ಮಕ್ತುಂಸಾಬ ನಾಗನೂರ, ಕಾರ್ಯದರ್ಶಿ ಇಮಾಮಸಾಬ ರೋಣದ, ಖಜಾಂಚಿ ಶಂಕ್ರಪ್ಪ ಯರಗುಡಿ, ಕರ್ನಾಟಕ ರಾಜ್ಯ ಹಮಾಲರ ಒಕ್ಕೂಟದ ರಾಜ್ಯಾಧ್ಯಕ್ಷ ಅಯ್ಯಪ್ಪ ನಾಯ್ಕರ್ ಸೇರಿದಂತೆ ಮಮ್ಮುಸಾಬ ವಾಲೀಕಾರ, ಇಮಾಮಹುಸೇನ ರೋಣದ, ರಾಜೇಸಾಬ ಕಣವಿ, ಗೋವಿಂದಪ್ಪ ಮುಂಡರಗಿ, ದೇವರಾಜ ಬಿನ್ನಾಳ, ಹುಸೇನಸಾಬ ವಡವಿ, ಬಸವರಾಜ ಸೂಡಿ, ಫಕ್ರುಸಾಬ ಘಟ್ಟದ, ಯಲ್ಲಪ್ಪ ಬೇವಿನಮರದ, ರಾಮಣ್ಣ ವಾಲ್ಮೀಕಿ, ಜಹಾಂಗೀರಸಾಬ ಲಕ್ಷ್ಮೇಶ್ವರ, ಶ್ರೀಕಾಂತ ಸಿಂಗಾಡಿ, ನಾಗಪ್ಪ ಕೊರ್ಲಹಳ್ಳಿ, ಶೇಖಪ್ಪ ವಾಲ್ಮೀಕಿ, ರವಿ ಚಲವಾದಿ, ಮಾರುತಿ ರಾಯಲದೊಡ್ಡಿ, ಸುಭಾಸ ಶೆಗಣಿ ಹಾಗೂ ರಾಘು ಮುಗಳಿ ಶ್ರಮಿಸಿದರು.

ಹಿರಿಯ ಪೈಲ್ವಾನರು ಹಾಗೂ ನಿರ್ಣಾಯಕರ ಮಾರ್ಗದರ್ಶನದಲ್ಲಿ ಪಂದ್ಯಗಳು ಶಿಸ್ತಿನಿಂದ ನಡೆದವು. ಜಾತ್ರೆಗೆ ಆಗಮಿಸಿದ್ದ ಸಾವಿರಾರು ಭಕ್ತರು ಹಾಗೂ ಕುಸ್ತಿ ಅಭಿಮಾನಿಗಳು ಪಂದ್ಯಾವಳಿಯನ್ನು ಉತ್ಸಾಹದಿಂದ ವೀಕ್ಷಿಸಿದರು. ರಾತ್ರಿವರೆಗೂ ಪಂದ್ಯಗಳು ಮುಂದುವರಿದಿದ್ದು, ಅಂತಿಮ ಫಲಿತಾಂಶಕ್ಕಾಗಿ ಕ್ರೀಡಾಭಿಮಾನಿಗಳು ಕಾತರದಿಂದ ಕಾಯುತ್ತಿದ್ದರು.

## ಉಸ್ತುವಾರಿ ಸಚಿವರಿಗೆ ವಾಣಿಜ್ಯೋದ್ಯಮ ಸಂಸ್ಥೆಯಿಂದ ಅಭಿನಂದನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಉಸ್ತುವಾರಿ ಸಚಿವರಾಗಿ ನೇಮಕಗೊಂಡಿರುವ ಈಶ್ವರ ಖಂಡ್ರೆ ಅವರನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಪದಾಧಿಕಾರಿಗಳ ನಿಯೋಗವು ಬೆಂಗಳೂರಿನ ಅವರ ನಿವಾಸದಲ್ಲಿ ಭೇಟಿ ಮಾಡಿ ಅಭಿನಂದನೆ ಸಲ್ಲಿಸಿತು. ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ನೇತೃತ್ವದ ನಿಯೋಗವು ಸಚಿವರಿಗೆ ಶುಭಾಶಯ ಕೋರಿ, ಜಿಲ್ಲೆಯ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡುವಂತೆ ಮನವಿ ಮಾಡಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಜಯದೇವ ಮೆಣಸಗಿ, ಗೌರವ ಕಾರ್ಯದರ್ಶಿ ಚನ್ನವೀರ ಹುಣಸಿಕಟ್ಟಿ, ಮಾಜಿ ಅಧ್ಯಕ್ಷ ಮಧುಸೂದನ ಪುಣೇಕರ ಹಾಗೂ ಪ್ರಕಾಶ ಉಗಲಾಟದ ಮತ್ತು ದಾನಪ್ಪಗೌಡರ ಉಪಸ್ಥಿತರಿದ್ದರು.

## ಪದ್ಮ ಶ್ರೇಣಿಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪದ್ಮ ಶ್ರೇಣಿಯ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ೨೦೨೭ನೇ ಸಾಲಿನ ಪದ್ಮಶ್ರೇಣಿ ಪ್ರಶಸ್ತಿಗಳಿಗೆ ಮಹಿಳಾ ಸಾಧಕರು, ಸಾಮಾಜಿಕ ಕಾರ್ಯಕರ್ತರು, ಗ್ರಾಮೀಣ ಮತ್ತು ಬುಡಕಟ್ಟು ಪ್ರದೇಶಗಳಲ್ಲಿ ಕೆಲಸ ಮಾಡುತ್ತಿರುವವರು ಮತ್ತು ಮಹಿಳೆಯರು ಮತ್ತು ಮಕ್ಕಳ ಕಲ್ಯಾಣ, ಪೋಷಣೆ, ಮಹಿಳೆಯರ ಮೇಲಿನ ಅಪರಾಧಗಳ ತಡೆಗಟ್ಟುವಿಕೆ, ಹೆಣ್ಣು ಮಕ್ಕಳ ರಕ್ಷಣೆ, ದುರ್ಬಲ ವರ್ಗಗಳ ಸಬಲೀಕರಣ, ಸಾಮಾಜಿಕ ನ್ಯಾಯ ಮತ್ತು ಸಂಬಂಧಿತ ವಲಯಗಳಿಗೆ ಕೊಡುಗೆ ನೀಡಿರುವವರನ್ನು ಗುರುತಿಸಿ ಅಂತಹ ಮಹಿಳೆಯರ ಹೆಸರುಗಳನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಶಿಫಾರಸ್ಸು ಮಾಡುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರು ಸೂಚನೆ ನೀಡಿದ್ದು, ವಿವಿಧ ಕ್ಷೇತ್ರಗಳಲ್ಲಿ ಕೊಡುಗೆ ನೀಡಿದಂತಹ ಕೊಪ್ಪಳ ಜಿಲ್ಲೆಯ ಅರ್ಹ ಮಹಿಳೆಯರು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಗದಗ ರಸ್ತೆ, ಕೊಪ್ಪಳ ಇಲ್ಲಿ ಅರ್ಜಿಗಳನ್ನು ಪಡೆದು ಜುಲೈ ೯ರ (ಕಛೇರಿ ಅವಧಿಯೊಳಗೆ) ಅರ್ಜಿಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಗದಗ ರಸ್ತೆ, ಕೊಪ್ಪಳ ಅಥವಾ ದೂರವಾಣಿ ಸಂ: ೦೮೫೩೯-೨೩೦೧೨೧ ಗೆ ಸಂಪರ್ಕಿಸುವಂತೆ ಇಲಾಖಾ ಸಹಾಯಕ ನಿರ್ದೇಶಕರು ಪ್ರಕಟಣೆ ತಿಳಿಸಿದ್ದಾರೆ.

### ಲಂಡನ್ ಸಾಫ್ಟ್‌ವೇರ್ ಇಂಜಿನಿಯರ್‌ನಿಂದ ದೇಣಿಗೆ

ಬಳ್ಳಾರಿ ಬೆಳಗಲ್ ರಸ್ತೆಯ ಆಕಾಶವಾಣಿ ಕೇಂದ್ರದ ಹತ್ತಿರವಿರುವ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಮೌಲಾನಾ ಆಜಾದ್ ಮಾದರಿ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತವಾಗಿ ಊಟದ ತಟ್ಟೆ ಹಾಗೂ ಲೋಟಗಳನ್ನು ದೇಣಿಗೆಯಾಗಿ ನೀಡಲಾಗಿದೆ. ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಮತ್ತು ಕ್ಷೀರಭಾಗ್ಯ ಯೋಜನೆಯಡಿ ಹಾಲು ಸೇವಿಸಲು ತಟ್ಟೆ ಹಾಗೂ ಲೋಟಗಳ ಕೊರತೆ ಇರುವುದನ್ನು ಮನಗಂಡು ಬಳ್ಳಾರಿಯ ತಾಳೂರು ರಸ್ತೆ ನಿವಾಸಿಯಾಗಿದ್ದು, ಪ್ರಸ್ತುತ ಲಂಡನ್‌ನಲ್ಲಿ ಸಾಫ್ಟ್‌ವೇರ್ ಇಂಜಿನಿಯರ್ ಆಗಿ ಸೇವೆ ಸಲ್ಲಿಸುತ್ತಿರುವ ಶೇಕ್ಷಾವಲಿ ಅವರು ತಮ್ಮ ಸ್ವಂತ ಖರ್ಚಿನಲ್ಲಿ ೧೫೦ ಊಟದ ತಟ್ಟೆಗಳು ಮತ್ತು ೧೫೦ ಹಾಲಿನ ಲೋಟಗಳನ್ನು ಶಾಲೆಗೆ ಉಚಿತವಾಗಿ ಕೊಡುಗೆಯಾಗಿ ನೀಡಿದ್ದಾರೆ.

## ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

2026-27ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ (ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಹೊಸದಾಗಿ ಪ್ರವೇಶ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಜುಲೈ 20ರೊಳಗೆ ಅರ್ಜಿ ಸಲ್ಲಿಸಬೇಕು ಎಂದು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004, 8050770005 ಅಥವಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಅತಿಥಿ ಶಿಕ್ಷಕರ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಶೈಕ್ಷಣಿಕ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಂಡರಗಿ ಮೌಲಾನಾ ಆಜಾದ್ ಮಾದರಿ ಶಾಲೆಯಲ್ಲಿ ಸಮಾಜ ವಿಜ್ಞಾನ ವಿಷಯ ಬೋಧನೆಗಾಗಿ ಅರ್ಹ ಅತಿಥಿ ಶಿಕ್ಷಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಮಾಜ ವಿಜ್ಞಾನ ವಿಷಯದಲ್ಲಿ ಬಿ.ಎಡ್. ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಜುಲೈ 11ರೊಳಗೆ ತಮ್ಮ ಶೈಕ್ಷಣಿಕ ದಾಖಲೆಗಳೊಂದಿಗೆ ಶಾಲೆಗೆ ಖುದ್ದಾಗಿ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಶಾಲೆಯ ಮುಖ್ಯೋಪಾಧ್ಯಾಯರನ್ನು 98442 88513 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಶಿಗ್ಲಿಯಲ್ಲಿ ರಸಗೊಬ್ಬರ ವಿತರಣೆಗೆ ಚಾಲನೆ ನೀಡಿದ ಶಾಸಕ ಡಾ. ಚಂದ್ರು ಲಮಾಣಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶಿಗ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ವತಿಯಿಂದ ರೈತರಿಗೆ ರಸಗೊಬ್ಬರ ವಿತರಣಾ ಕಾರ್ಯಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಭಾನುವಾರ ಚಾಲನೆ ನೀಡಿದರು.



ಬಳಿಕ ಮಾತನಾಡಿದ ಅವರು, ಶಿಗ್ಲಿ ಭಾಗದಲ್ಲಿ ಹೆಚ್ಚಿನ ಸಂಖ್ಯೆಯ ರೈತರು ಕೃಷಿಯನ್ನು ಅವಲಂಬಿಸಿದ್ದು, ಅವರಿಗೆ ಸಕಾಲದಲ್ಲಿ ರಸಗೊಬ್ಬರ ದೊರೆಯುವ ಉದ್ದೇಶದಿಂದ ವಿತರಣಾ ವ್ಯವಸ್ಥೆ ಆರಂಭಿಸಲಾಗಿದೆ. ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಸಹಕಾರ ಸಂಘಗಳು ರೈತರ ಹಿತಾಸಕ್ತಿಯನ್ನು ಕೇಂದ್ರಬಿಂದುವಾಗಿಟ್ಟುಕೊಂಡು ಕಾರ್ಯನಿರ್ವಹಿಸಬೇಕು. ರೈತರಿಗೆ ಅಗತ್ಯ ಸೌಲಭ್ಯಗಳನ್ನು ಸಮಯಕ್ಕೆ ಒದಗಿಸುವುದೇ ಸಂಘದ ಮುಖ್ಯ ಧ್ಯೇಯವಾಗಬೇಕು ಎಂದು ಹೇಳಿದರು.

> "ರೈತರಿಗೆ ಸಕಾಲದಲ್ಲಿ ರಸಗೊಬ್ಬರ ದೊರೆಯುವುದು ಅತ್ಯಗತ್ಯ. ರೈತರ ಹಿತ ಕಾಯುವುದೇ ಸಹಕಾರ ಸಂಘಗಳ ಮೊದಲ ಆದ್ಯತೆಯಾಗಬೇಕು."
> – ಡಾ. ಚಂದ್ರು ಲಮಾಣಿ, ಶಾಸಕ

ಸಂಘದ ಅಧ್ಯಕ್ಷ ಯಲ್ಲಪ್ಪ ತಳವಾರ ಮಾತನಾಡಿ, ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಆಡಳಿತ ಮಂಡಳಿಯು ರಸಗೊಬ್ಬರ ವಿತರಣೆಗೆ ನಿರ್ಧರಿಸಿದ್ದು, ಎಫ್ಐಡಿ (ಈಖಳಆ) ವ್ಯವಸ್ಥೆಯ ಮೂಲಕ ಗೊಬ್ಬರ ವಿತರಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ನಾಗಪ್ಪ ತೋಟದ, ರಾಮಣ್ಣ ಲಮಾಣಿ, ಡಿ.ವೈ. ಹುನಗುಂದ, ಶಿವಣ್ಣ ಕುರಿ, ಅಶೋಕ ಶಿರಹಟ್ಟಿ, ಬಸಣ್ಣ ಜರ್ಗಿ, ಸಿದ್ದ ಪೂಜಾರ, ಬಸವರಾಜ ತೋಟದ, ಶಿವಾನಂದ ಅಡರಕಟ್ಟಿ, ದಾನಪ್ಪನವರ, ಸಂಜೀವ ದೇಸಾಯಿ, ಸುರೇಶ ಗೋದಿ, ಶಿವು ವಾರದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಅಣ್ಣಿಗೇರಿ ಗುರುಗಳ ಪ್ರತಿಷ್ಠಾನದಿಂದ ನಾಲ್ಕು ಶಾಲೆಗಳ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

# ಪ್ರತಿಭೆಗೆ ಪ್ರೋತ್ಸಾಹದ ಸ್ಪರ್ಶ



> "ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಿದಾಗಲೇ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹೆಚ್ಚುತ್ತದೆ. ಮೊಬೈಲ್ ಮತ್ತು ಟಿವಿಯಿಂದ ದೂರವಿದ್ದು ಗುರಿಯತ್ತ ಸಾಗಿದರೆ ಯಶಸ್ಸು ಖಚಿತ."
> – ಸುಭಾಶ್ಚಂದ್ರ ಬೆಟ್ಟದೂರ

**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿಭಾ ಪುರಸ್ಕಾರಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಮತ್ತು ಚೈತನ್ಯ ತುಂಬುತ್ತವೆ. ವಿದ್ಯಾರ್ಥಿಗಳು ಮೊಬೈಲ್ ಹಾಗೂ ಟಿವಿಯಿಂದ ದೂರವಿದ್ದು, ಓದು-ಬರಹದಲ್ಲಿ ಏಕಾಗ್ರತೆ ಬೆಳೆಸಿಕೊಂಡರೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು ಎಂದು ಸುಭಾಶ್ಚಂದ್ರ ಬೆಟ್ಟದೂರ ಹೇಳಿದರು.

ಗದಗ ತಾಲೂಕಿನ ಅಡವಿಸೋಮಾಪೂರ ಸರ್ಕಾರಿ ಪ್ರೌಢಶಾಲೆಯಲ್ಲಿ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ ವತಿಯಿಂದ ಎಸ್ಎಸ್ಎಲ್‌ಸಿಯಲ್ಲಿ ಮೊದಲ ಐದು ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ನಗದು ಬಹುಮಾನ, ಅಭಿನಂದನಾ ಪತ್ರ, ಕಾಲೇಜು ಬ್ಯಾಗ್ ಹಾಗೂ ಸಿಹಿ ವಿತರಿಸಿ ಅವರು ಮಾತನಾಡಿದರು.

ಅಡವಿಸೋಮಾಪೂರ ಶಾಲೆಯ ವಾಣಿ ಹೊಸಳ್ಳಿ, ಕೌಸರ್‌ಭಾನು ನದಾಫ, ಪ್ರೀತಮ್ ತುಪ್ಪದ, ಮಂಜುಳಾ ಹುಲಗಣ್ಣವರ ಹಾಗೂ ಮಧುಮತಿ ಹುಲಗಣ್ಣವರ ಅವರನ್ನು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಪ್ರತಿಷ್ಠಾನದ ಕುರಿತು ಶಿವಾನಂದ ಕಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲೆಯ ಮುಖ್ಯೋಪಾಧ್ಯಾಯಿನಿ ಎಚ್.ಎ. ಚುಳಕಿ ಅಧ್ಯಕ್ಷತೆ ವಹಿಸಿದ್ದರು. ಕಾವೇರಿ ಲಮಾಣಿ ಮತ್ತು ತಂಡ ಪ್ರಾರ್ಥಿಸಿದರು. ಕೆ.ಸಿ. ವಸ್ತ್ರದ ಸ್ವಾಗತಿಸಿದರು. ಬಿ.ಎಚ್. ಕಲಾವತಿ ನಿರೂಪಿಸಿದರು. ರೇಖಾ ಪಾಟೀಲ ವಂದಿಸಿದರು.

**ಲಕ್ಕುಂಡಿಯಲ್ಲೂ ಪ್ರತಿಭಾ ಪುರಸ್ಕಾರ:** ಲಕ್ಕುಂಡಿ ಸರ್ಕಾರಿ ಪ್ರೌಢಶಾಲೆಯ ಹೇಮಲತಾ ಕುಲಕರ್ಣಿ, ಪ್ರೇಮಾ ಬಾರಿಕಾಯಿ, ವೈಷ್ಣವಿ ನೆಲಗುಡ್ಡದ, ಲಕ್ಷ್ಮೀ ಅಬ್ಬಿಗೇರಿ ಹಾಗೂ ಪೂರ್ಣಿಮಾ ಹನವಾಳ ಅವರನ್ನು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಜಿ.ಆರ್. ಶೆಟ್ಟರ ಅಧ್ಯಕ್ಷತೆ ವಹಿಸಿದ್ದರು. ಜೆ.ವಿ. ಹಿರೇಮಠ, ಎಸ್.ಎ. ಮುಂಡೇವಾಡಿ, ವೈ.ವೈ. ಬೆಟಗೇರಿ, ಸುಭಾಶ್ಚಂದ್ರ ಬೆಟ್ಟದೂರ, ಶಿವಾನಂದ ಕಟ್ಟಿ, ನೇಹಾ ಖಟವಟೆ, ರೇಖಾ ಇನಾಮತಿ, ಪ್ರಸನ್ನ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಲಕ್ಕುಂಡಿಯ ಕಿತ್ತೂರ ರಾಣಿ ಚೆನ್ನಮ್ಮ ವಸತಿ ಶಾಲೆಯ ದೀಪಾ ಅಕ್ಕಿ, ಭೂಮಿಕಾ ಚೆಂಡೂರ, ದೀಪಿಕಾ ಅಂಗಡಿ, ಜೋಷ್ನಾ ಚೆನ್ನದಾಸರ, ತನುಶ್ರೀ ಕುರಹಟ್ಟಿ ಹಾಗೂ ರಕ್ಷಿತಾ ತಳವಾರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ವೀರೇಶ ಕಮ್ಮಾರ, ಮಂಗಲಾ ಕುಡತರಕರ ಸೇರಿದಂತೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

**ಹರ್ಲಾಪೂರದಲ್ಲೂ ಗೌರವ:** ಹರ್ಲಾಪೂರ ಸರ್ಕಾರಿ ಪ್ರೌಢಶಾಲೆಯ ನಿಖಿಲ್ ಕೋರಿ, ಭಾಗ್ಯಲಕ್ಷ್ಮೀ ಶಾನುಭೋಗರ, ಜ್ಯೋತಿ ಮಣ್ಣಾಪೂರ, ಭಾಗೀರಥಿ ಪೂಜಾರ ಹಾಗೂ ಅನುಶ್ರೀ ಹಂಚಿನಾಳ ಅವರನ್ನು ಪ್ರತಿಭಾ ಪುರಸ್ಕಾರ ನೀಡಿ ಅಭಿನಂದಿಸಲಾಯಿತು.

ಎಸ್.ಎಚ್. ಹೊಸಮನಿ, ಎಫ್.ಎ. ಅರಸೂರ, ಸತೀಶ ಸಲಗಾರ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಸಸಿ ನೆಟ್ಟು ಪರಿಸರ ಕಾಳಜಿಗೆ ರೋಟರಿ ಸಂದೇಶ




**ವಿಜಯಸಾಕ್ಷಿ ಸುದ್ದಿ, ಗದಗ**

ಆರೋಗ್ಯಕರ ಜೀವನಕ್ಕೆ ಶುದ್ಧ ಪರಿಸರವೇ ಮೂಲಾಧಾರವಾಗಿದ್ದು, ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಮಕ್ಕಳಲ್ಲಿ ಬಾಲ್ಯದಿಂದಲೇ ಪರಿಸರ ಪ್ರಜ್ಞೆ ಬೆಳೆಸಿದರೆ ಹಸಿರು ಸಮಾಜ ನಿರ್ಮಾಣ ಸಾಧ್ಯ ಎಂದು ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ ಹೇಳಿದರು.

ನಗರದ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 10ರಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಗದಗ-ಬೆಟಗೇರಿ ರೋಟರಿ ಕ್ಲಬ್ ವತಿಯಿಂದ ಆಯೋಜಿಸಿದ್ದ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

> "ಶುದ್ಧ ಪರಿಸರವೇ ಆರೋಗ್ಯಕರ ಬದುಕಿನ ಅಡಿಪಾಯ. ಪ್ರತಿಯೊಬ್ಬರೂ ಒಂದು ಸಸಿ ನೆಟ್ಟು ಅದರ ಪೋಷಣೆ ಮಾಡಿದರೆ ಮುಂದಿನ ಪೀಳಿಗೆಗೆ ಹಸಿರು ಭವಿಷ್ಯ ಕಟ್ಟಬಹುದು."
> – ಡಾ. ಪ್ರದೀಪ ಉಗಲಾಟ, ಅಧ್ಯಕ್ಷರು, ಗದಗ-ಬೆಟಗೇರಿ ರೋಟರಿ ಕ್ಲಬ್

"ಪರಿಸರವನ್ನು ಉಳಿಸೋಣ-ಭವಿಷ್ಯವನ್ನು ಬೆಳೆಸೋಣ" ಎಂಬ ಸಂದೇಶವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಶುದ್ಧ ಗಾಳಿ, ಶುದ್ಧ ನೀರು ಹಾಗೂ ಪೌಷ್ಟಿಕ ಆಹಾರಕ್ಕಾಗಿ ಪರಿಸರ ಸಂರಕ್ಷಣೆ ಅತ್ಯಗತ್ಯವಾಗಿದೆ. ಶಾಲಾ ಹಂತದಲ್ಲಿಯೇ ಪರಿಸರದ ಮಹತ್ವದ ಕುರಿತು ಜಾಗೃತಿ ಮೂಡಿಸಿದರೆ ಪರಿಸರ ಸ್ನೇಹಿ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಶಾಲೆಯ ಮುಖ್ಯೋಪಾಧ್ಯಾಯಿನಿ ಬಾಳಿಹಳ್ಳಿಮಠ ಮಾತನಾಡಿ, ವಿವಿಧ ಸಂಘ-ಸಂಸ್ಥೆಗಳು ಶಾಲೆಗಳಲ್ಲಿ ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ. ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಪರಿಸರದ ಬಗ್ಗೆ ಕಾಳಜಿ ಮತ್ತು ಹೊಣೆಗಾರಿಕೆ ಬೆಳೆಸುತ್ತವೆ ಎಂದು ಹೇಳಿದರು.

ಮುಖ್ಯೋಪಾಧ್ಯಾಯ ಬಿ.ಎಸ್. ಮೆಣಸಿನಕಾಯಿ ಸ್ವಾಗತಿಸಿದರು. ಕವಿತಾ ಬೇಲೇರಿ ಕಾರ್ಯಕ್ರಮ ನಿರೂಪಿಸಿದರು. ಎಫ್.ಎ. ನಮಾಜಿ ವಂದಿಸಿದರು.

ಈ ಸಂದರ್ಭದಲ್ಲಿ ರೋಟರಿ ಕ್ಲಬ್ ಕಾರ್ಯದರ್ಶಿ ಅಕ್ಷಯ್ ಶೆಟ್ಟಿ, ರೋಟರಿ ವೆಲ್‌ಫೇರ್ ಅಧ್ಯಕ್ಷ ಶ್ರೀಧರ ಸುಲ್ತಾನಪೂರ, ಎಸ್.ವಿ. ಕುಂಬಾರ, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಜು. 9ರಂದು ಅಧ್ಯಕ್ಷರಾಗಿ ಪ್ರವೀಣ ವಾರಕರ, ಕಾರ್ಯದರ್ಶಿಯಾಗಿ ಲಿಂಗರಾಜ ತೋಟದ ಪದಗ್ರಹಣ

# ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ಗೆ ನೂತನ ಪದಾಧಿಕಾರಿಗಳ ಆಯ್ಕೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ 2026-27ನೇ ಸಾಲಿನ ನೂತನ ಅಧ್ಯಕ್ಷರಾಗಿ ಪ್ರವೀಣ ವಾರಕರ ಹಾಗೂ ಕಾರ್ಯದರ್ಶಿಯಾಗಿ ಲಿಂಗರಾಜ ತೋಟದ ಆಯ್ಕೆಯಾಗಿದ್ದಾರೆ.

ಉಪಾಧ್ಯಕ್ಷರಾಗಿ ಡಾ. ನವೀನ ಹಿರೇಗೌಡರ ಮತ್ತು ರಾಜಣ್ಣ ಮಲ್ಲಾಡದ, ಸಹ ಕಾರ್ಯದರ್ಶಿಯಾಗಿ ರೇಣುಕಪ್ರಸಾದ ಹಿರೇಮಠ, ಖಜಾಂಚಿಯಾಗಿ ರೇಣುಕಪ್ರಸಾದ ಶಿಗ್ಲಿಮಠ ಆಯ್ಕೆಯಾಗಿದ್ದಾರೆ.

ಲಯನ್ಸ್ ಕ್ಲಬ್‌ನ ಮಹಿಳಾ ಘಟಕದ ಅಧ್ಯಕ್ಷೆಯಾಗಿ ಅಮೃತಾ ವಾರಕರ, ಕಾರ್ಯದರ್ಶಿಯಾಗಿ ಅಪರ್ಣಾ ತೋಟದ ಹಾಗೂ ಖಜಾಂಚಿಯಾಗಿ ಪ್ರಿಯಾ ಶಿಗ್ಲಿಮಠ ಆಯ್ಕೆಯಾಗಿದ್ದಾರೆ.

ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವು ಜುಲೈ 9ರಂದು ಗುರುವಾರ ಸಂಜೆ 7 ಗಂಟೆಗೆ ಮುಂಡರಗಿ ರಸ್ತೆಯ ಲಯನ್ಸ್ ಶಾಲೆಯ ಸಭಾಂಗಣದಲ್ಲಿ ನಡೆಯಲಿದೆ. ಲಯನ್ಸ್ ಕ್ಲಬ್‌ನ ದ್ವಿತೀಯ ಉಪ ಜಿಲ್ಲಾ ಗವರ್ನರ್ ಗವಿಸಿದ್ದಪ್ಪ ಮುದ್ಗಲ್ ಪದಗ್ರಹಣ ನೆರವೇರಿಸಲಿದ್ದು, ನಿಕಟಪೂರ್ವ ಜಿಲ್ಲಾ ಗವರ್ನರ್ ಆನಂತ ಪೋತ್ನೀಸ್ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

# ಜು.20ರಿಂದ ಮನೆ-ಮನೆಗೆ ರಾಯರ ಪಾದುಕೆ ಪೂಜೆ



**ವಿಜಯಸಾಕ್ಷಿ ಸುದ್ದಿ, ಗದಗ**

ಕಲಿಯುಗದ ಕಾಮಧೇನು, ಕಲ್ಪವೃಕ್ಷ ಹಾಗೂ ಅಪಮೃತ್ಯು ಪರಿಹಾರದ ಗುರು ಎಂದೇ ಆರಾಧಿಸಲ್ಪಡುವ ಶ್ರೀ ರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವದ ಅಂಗವಾಗಿ ಗದಗ ನಗರದ ಕಳಸಾಪೂರ ರಸ್ತೆಯಲ್ಲಿರುವ ಮಂತ್ರಾಲಯ ರಾಘವೇಂದ್ರ ಸ್ವಾಮಿಗಳ ಶಾಖಾ ಮಠದಿಂದ ಭಕ್ತರ ಮನೆ-ಮನೆಗೆ ರಜತ ಪಾದುಕೆ ಪೂಜೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.


ಆರಾಧನಾ ಮಹೋತ್ಸವದ ಪ್ರಯುಕ್ತ ರಜತ ಪ್ರಹ್ಲಾದರಾಯರ ಮೂರ್ತಿ, ರಜತ ಬೃಂದಾವನ ಹಾಗೂ ರಜತ ಪಾದುಕೆಗಳನ್ನು ಭಕ್ತರ ಮನೆಗಳಿಗೆ ಕೊಂಡೊಯ್ದು ವಿಶೇಷ ಪೂಜೆ ನೆರವೇರಿಸಲಾಗುವುದು. ಈ ಸೇವೆಯಿಂದ ಭಕ್ತರಿಗೆ ಶ್ರೀ ರಾಘವೇಂದ್ರ ಸ್ವಾಮಿಗಳ ಕೃಪೆಗೆ ಪಾತ್ರರಾಗುವ ಅಪೂರ್ವ ಅವಕಾಶ ದೊರೆಯಲಿದೆ.

ಮಂತ್ರಾಲಯ ಪೀಠಾಧಿಪತಿಗಳಾದ ಶ್ರೀ ಶ್ರೀ ಸುಭುದೇಂದ್ರ ತೀರ್ಥ ಶ್ರೀಗಳ ಅಪ್ಪಣೆಯಂತೆ ಈ ವಿಶೇಷ ಪೂಜಾ ಸೇವೆ ಆಯೋಜಿಸಲಾಗಿದ್ದು, ಭಕ್ತರು ರಾಯರ ಪಾದುಕೆಗಳನ್ನು ಪೂಜಿಸಿ ಆಶೀರ್ವಾದ ಪಡೆಯುವಂತೆ ಮಠ ಮನವಿ ಮಾಡಿದೆ. ಜುಲೈ 20ರಿಂದ ಆಗಸ್ಟ್ 28ರವರೆಗೆ ಮನೆ-ಮನೆಗೆ ಪಾದುಕೆ ಪೂಜೆ ನಡೆಯಲಿದೆ. ಪೂಜೆ ಮಾಡಿಸಿಕೊಳ್ಳಲು ಆಸಕ್ತ ಭಕ್ತರು ಮುಂಚಿತವಾಗಿ ಕಳಸಾಪೂರ ರಸ್ತೆಯ ರಾಘವೇಂದ್ರ ಶಾಖಾ ಮಠದ ಕಾರ್ಯಾಲಯದಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಶಾಖಾ ಮಠದ ಆಚಾರ್ಯ ನಂಜನಗೂಡು ಅನಿಲ ಆಚಾರ್ಯ ಅವರನ್ನು ಮೊ. 97392 74755ರಲ್ಲಿ ಸಂಪರ್ಕಿಸಬಹುದಾಗಿದೆ.

ಶಿಕ್ಷಕರಿಗೆ ಸಹಕಾರ ನೀಡುವಂತೆ ತಹಶೀಲ್ದಾರ್‌ಗೆ ನೌಕರ-ಶಿಕ್ಷಕರ ಸಂಘಗಳ ಮನವಿ

# ಬಿಎಲ್‌ಒ ಕಾರ್ಯಕ್ಕೆ ಒತ್ತಡ ಬೇಡ




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬಿಎಲ್‌ಒ (ಬೂತ್ ಮಟ್ಟದ ಅಧಿಕಾರಿ) ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಮೇಲೆ ಅನಗತ್ಯ ಒತ್ತಡ ಹೇರದೆ, ಅಗತ್ಯ ಸಹಕಾರ ನೀಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ನೌಕರರ ಸಂಘ ಹಾಗೂ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಲಕ್ಷ್ಮೇಶ್ವರ ಘಟಕದ ಪದಾಧಿಕಾರಿಗಳು ಸೋಮವಾರ ತಹಸೀಲ್ದಾರ್ ಧನಂಜಯ ಎಂ. ಅವರಿಗೆ ಮನವಿ ಸಲ್ಲಿಸಿದರು.

> "ಚುನಾವಣೆ ಸೇರಿದಂತೆ ಎಲ್ಲ ಸರ್ಕಾರಿ ಜವಾಬ್ದಾರಿಗಳನ್ನು ಶಿಕ್ಷಕರು ಪ್ರಾಮಾಣಿಕವಾಗಿ ನಿರ್ವಹಿಸುತ್ತಿದ್ದಾರೆ. ಶಿಕ್ಷಣಕ್ಕೂ ಧಕ್ಕೆಯಾಗದಂತೆ ಬಿಎಲ್‌ಒ ಕಾರ್ಯದಲ್ಲಿ ಸಹಕಾರ ನೀಡಬೇಕು."
> – ಕರ್ನಾಟಕ ರಾಜ್ಯ ನೌಕರರ ಸಂಘ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ

ಸಂಘದ ಅಧ್ಯಕ್ಷರಾದ ಗುರುರಾಜ ಹವಳದ, ಮಹದೇವಪ್ಪ ಭರಮಗೌಡರ ಹಾಗೂ ಕಾರ್ಯದರ್ಶಿಗಳಾದ ಎಂ.ಎ. ನದಾಫ್ ಮತ್ತು ಶ್ರೀಕಾಂತ ನಂದೆಣ್ಣವರ ಮಾತನಾಡಿ, ಚುನಾವಣೆ ಸೇ-ರಿದಂತೆ ಕಂದಾಯ ಇಲಾಖೆಯ ವಿವಿಧ ಜವಾಬ್ದಾರಿಗಳನ್ನು ಶಿಕ್ಷಕರು ಪ್ರಾಮಾಣಿಕವಾಗಿ ನಿರ್ವಹಿಸುತ್ತಿದ್ದಾರೆ. ಪ್ರಸ್ತುತ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಜುಲೈ 29ರವರೆಗೆ ನಡೆಯುತ್ತಿದ್ದು, ಇದರ ಜೊತೆಗೆ ಶೈಕ್ಷಣಿಕ ಚಟುವಟಿಕೆಗಳ ಜವಾಬ್ದಾರಿಯೂ ಹೆಚ್ಚಾಗಿದೆ ಎಂದು ತಿಳಿಸಿದರು.

ಶಾಲೆಗಳು ಆರಂಭವಾಗಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಬೋಧನೆಗೆ ಹೆಚ್ಚಿನ ಸಮಯ ಮೀಸಲಿಡಬೇಕಿದೆ. ಆದರೆ ವಿವಿಧ ಇಲಾಖೆಗಳ ಹೆಚ್ಚುವರಿ ಕರ್ತವ್ಯಗಳಿಂದ ಬೋಧನಾ ಕಾರ್ಯಕ್ಕೆ ಅಡಚಣೆಯಾಗುತ್ತಿದೆ. ಈಗಾಗಲೇ ಲಕ್ಷ್ಮೇಶ್ವರ ತಾಲೂಕಿನಲ್ಲಿ ಶಿಕ್ಷಕರ ಕೊರತೆ ಇರುವುದ-ರಿಂದ ಮಕ್ಕಳ ಶಿಕ್ಷಣದ ಗುಣಮಟ್ಟದ ಮೇಲೂ ಪರಿಣಾಮ ಬೀರುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಹೀಗಾಗಿ ಬಿಎಲ್‌ಒ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಅನಗತ್ಯ ಒತ್ತಡ ಹೇರದೆ ಅಗತ್ಯ ಸಹಕಾರ ನೀಡುವಂತೆ ತಹಶೀಲ್ದಾರ್‌ಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಂಘದ ಖಜಾಂಚಿ ಎಂ.ಡಿ. ವಾರದ, ರಾಜ್ಯ ಪರಿಷತ್ ಸದಸ್ಯ ಎ.ಬಿ. ಗೌಡರ, ನಿರ್ದೇಶಕರಾದ ಬಸವರಾಜ ಯರಗುಪ್ಪಿ, ಹನೀಫ್ ಶಿರಹಟ್ಟಿ, ಪ್ರಶಾಂತ ಸನದಿ, ಜಿಲ್ಲಾ ನಾಮನಿರ್ದೇಶಿತ ಸದಸ್ಯರಾದ ಎಂ.ಎಸ್. ಹಿರೇಮಠ ಹಾಗೂ ಎಂ. ಎಸ್. ಚಾಕಲಬ್ಬಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಬೆಳೆ ವಿಮೆಗೆ ಹೊಸ ಮಾರ್ಗಸೂಚಿ

# ಬೆಳೆ ಸಮೀಕ್ಷೆ ವರದಿಗೆ ಹೊಂದಿಕೆಯಾದರೆ ಮಾತ್ರ ಪರಿಹಾರ; ರೈತರಿಗೆ ಕೃಷಿ ಇಲಾಖೆ ಸೂಚನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಗಾರು ಹಂಗಾಮಿನ ಬೆಳೆ ವಿಮೆ ಪರಿಹಾರ ಪಡೆಯಲು ರೈತರು ಬೆಳೆ ಸಮೀಕ್ಷೆಯಲ್ಲಿ ನಿಖರ ಮಾಹಿತಿ ದಾಖಲಿಸುವುದು ಕಡ್ಡಾಯವಾಗಿದೆ. ಬೆಳೆ ಸಮೀಕ್ಷೆ ವರದಿಗೆ ಹೊಂದಿಕೆಯಾಗದ ಬೆಳೆ ವಿಮೆ ಪ್ರಸ್ತಾವನೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಸ್ಪಷ್ಟಪಡಿಸಿದೆ.

2026-27ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸರ್ಕಾರ ಹೊಸ ಮಾರ್ಗಸೂಚಿಗಳನ್ನು ಜಾರಿಗೊಳಿಸಿದ್ದು, ಬೆಳೆ ವಿಮೆ ಅರ್ಜಿಗಳನ್ನು ಬೆಳೆ ಸಮೀಕ್ಷೆ ವರದಿಯೊಂದಿಗೆ ತಾಳೆ ಹಾಕಿದ ಬಳಿಕವೇ ವಿಮೆ ಪರಿಹಾರಕ್ಕೆ ಪರಿಗಣಿಸಲಾಗುತ್ತದೆ.

ಬೆಳೆ ಸಮೀಕ್ಷೆಯಲ್ಲಿ ಪಾಳು ಅಥ-ವಾ ಕಟಾವು ಪ್ರದೇಶವೆಂದು ದಾಖಲಾದ ಜಮೀನುಗಳಿಗೆ ಸಲ್ಲಿಸಿರುವ ವಿಮೆ ಅರ್ಜಿಗಳು ಅನರ್ಹವಾಗಲಿವೆ. ಸಮೀಕ್ಷೆಯಲ್ಲಿ ದಾಖಲಾದ ಬೆಳೆ ಹೆಸರು ಹಾಗೂ ವಿಸ್ತೀರ್ಣವನ್ನೇ ಅಂತಿಮವಾಗಿ ಪರಿಗಣಿಸಲಾಗುತ್ತದೆ. ವಿಮೆ ಮಾಡಿಸಿರುವ ವಿಸ್ತೀರ್ಣಕ್ಕಿಂತ ಕಡಿಮೆ ವಿಸ್ತೀರ್ಣ ಬೆಳೆ ಸಮೀಕ್ಷೆಯಲ್ಲಿ ಕಂಡುಬಂದರೆ ಗ-ರಿಷ್ಠ ಶೇ.25 ಅಥವಾ ಒಂದು ಎಕರೆ (ಇವೆರಡರಲ್ಲಿ ಕಡಿಮೆ) ವರೆಗೆ ಮಾತ್ರ ವಿನಾಯಿತಿ ದೊರೆಯಲಿದೆ.

ಒಂದೇ ಸರ್ವೆ ಸಂಖ್ಯೆಯ ಬೇರೆ ಹಿಸ್ಸೆಯಲ್ಲಿ ಬೆಳೆ ಬೆಳೆದಿದ್ದರೂ ಅಥವಾ ಒಂದೇ ಅರ್ಜಿಯಲ್ಲಿರುವ ಹಲವು ಸರ್ವೆ ಸಂಖ್ಯೆಗಳ ವಿವರಗಳು ಬೆಳೆ ಸಮೀಕ್ಷೆಗೆ ಹೊಂದಿಕೆಯಾಗದಿದ್ದರೂ ಅಂತಹ ಅರ್ಜಿಗಳಿಗೆ ವಿಮೆ ಪರಿಹಾರ ಸಿಗುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

*ಬೆಳೆ ವಿಮೆ ಕಂತು ಪಾವತಿಗೆ ದಿನಾಂಕ ನಿಗದಿ*

ಹೆಸರು ಹಾಗೂ ಹತ್ತಿ ಬೆಳೆಗಳಿಗೆ ಜುಲೈ 15, ಗೋವಿನಜೋಳ, ಸಜ್ಜೆ, ತೊಗರಿ, ಶೇಂಗಾ, ಭತ್ತ, ನೀರಾವರಿ ಮೆಣಸಿನಕಾಯಿ ಹಾಗೂ ಈರುಳ್ಳಿ ಬೆಳೆಗಳಿಗೆ ಜುಲೈ 31 ಮತ್ತು ಸೂರ್ಯಕಾಂತಿ, ಮಳೆಯಾಶ್ರಿತ ಮೆಣಸಿನಕಾಯಿ ಹಾಗೂ ಈರುಳ್ಳಿ ಬೆಳೆಗಳಿಗೆ ಆಗಸ್ಟ್ 14 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಂಡಸ್‌ಇಂಡ್ ಜನರಲ್ ಇನ್ಶೂರೆನ್ಸ್ ಕಂಪನಿಯ ಜಿಲ್ಲಾ ವ್ಯವಸ್ಥಾಪಕ ನಿಂಗಯ್ಯ (9008258062), ಜಿಲ್ಲಾ ಸಮನ್ವಯ ಅಧಿಕಾರಿ ಸಿದ್ದನಗೌಡ ಪಾಟೀಲ (9742099809) ಹಾಗೂ ಗದಗ ತಾಲೂಕು ಪ್ರತಿನಿಧಿ ಶಿವಮೂರ್ತಿ (8861385744) ಅವರನ್ನು ಸಂಪರ್ಕಿಸಬಹುದು.

ರಜತ ಮಹೋತ್ಸವದಲ್ಲಿ ರಂಭಾಪುರಿ ಜಗದ್ಗುರುಗಳ ಸಂದೇಶ

# ಸಂಸ್ಕಾರ ಉಳಿದರೆ ಸಂಸ್ಕೃತಿ ಉಳಿಯುತ್ತದೆ



**ವಿಜಯಸಾಕ್ಷಿ ಸುದ್ದಿ, ಕಲಬುರಗಿ**

ಜೀವನದಲ್ಲಿ ನಂಬಿಕೆ ಮತ್ತು ವಿಶ್ವಾಸ ಕಳೆದುಹೋದರೆ ಬದುಕು ಕಷ್ಟವಾಗುತ್ತದೆ. ಸುಖ-ಸಮೃದ್ಧಿ ನೆಲೆಸಬೇಕಾದರೆ ಉತ್ತಮ ಸಂಸ್ಕಾರ ಅಗತ್ಯ. ಸತ್ಯ ಮತ್ತು ಶುದ್ಧ ಸಂಸ್ಕಾರಗಳ ಬಲದಿಂದಲೇ ಸಂಸ್ಕೃತಿ ಉಳಿದು ಬೆಳೆಯಲು ಸಾಧ್ಯ ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

> "ಸುಖ-ಸಮೃದ್ಧಿ ನೆಲೆಸಬೇಕಾದರೆ ಸಂಸ್ಕಾರ ಅಗತ್ಯ. ಸತ್ಯ ಮತ್ತು ಶುದ್ಧ ಸಂಸ್ಕಾರಗಳ ಬಲದಿಂದಲೇ ಸಂಸ್ಕೃತಿ ಉಳಿದು ಬೆಳೆಯಲು ಸಾಧ್ಯ."
> – ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು

ನಗರದ ಮುಕ್ತಾಂಪುರ ಶ್ರೀ ಬಸವಣ್ಣ ದೇವಸ್ಥಾನದಲ್ಲಿ ನಡೆದ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ಮಾಲಾಧಾರಿಗಳ ರಜ-ತ ಮಹೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಇಂದಿನ ಸಮಾಜದಲ್ಲಿ ಅನಾಗರಿಕ ಘಟನೆಗಳು ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಪ್ರತಿಯೊಬ್ಬರೂ ತಮ್ಮ ವೈಯಕ್ತಿಕ ಅಭಿವೃದ್ಧಿಯನ್ನಷ್ಟೇ ಬಯಸದೇ, ದೇಶ, ಧರ್ಮ ಹಾಗೂ ಸಮಾಜದ ಅಭಿವೃದ್ಧಿಯತ್ತಲೂ ಗಮನಹರಿಸಬೇಕು ಎಂದು ಕರೆ ನೀಡಿದರು.

ಸದ್ಗುಣವಂತರ ಸಂಗದಿಂದ ಬದುಕಿನ ಮೌಲ್ಯ ಹೆಚ್ಚುತ್ತದೆ. ವೀರಶೈವ ಧರ್ಮವು ಸಮಾಜಕ್ಕೆ ಒಳಿತನ್ನೇ ಬೋಧಿಸಿದ್ದು, ಶ್ರೀ ಜಗದ್ಗುರು ರೇಣುಕಾಚಾರ್ಯರು ಹಾಗೂ ಶ್ರೀ ಜಗದ್ಗುರು ರೇವಣಸಿದ್ಧೇಶ್ವರರ ಧಾರ್ಮಿಕ ಮತ್ತು ಸಾಮಾಜಿಕ ಕ್ರಾಂತಿಯೇ ಅನೇಕ ಬದಲಾವಣೆಗಳಿಗೆ ಮೂಲವಾಗಿದೆ ಎಂದು ಹೇಳಿದರು. ಗುರುನಾಮ ಸ್ಮರಣೆಯಲ್ಲಿ ನಿರಂತರ ತೊಡಗಿರುವ ರೇವಣಸಿದ್ಧೇಶ್ವರ ಮಾಲಾಧಾರಿಗಳ ಸೇವೆ ಶ್ಲಾಘನೀಯವಾಗಿದ್ದು, ಅವರ 25 ವರ್ಷದ ಸೇವಾ ಪಯಣದ ರಜತ ಮಹೋತ್ಸವ ಸಂತಸ ತಂದಿದೆ ಎಂದರು.

ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ಜಿಲ್ಲಾ ಅಧ್ಯಕ್ಷ ಹೊನ್ನಕಿರಣಗಿ ಚಂದ್ರಗುಂಡ ಶಿವಾಚಾರ್ಯರು ಕಾರ್ಯಕ್ರಮ ಉದ್ಘಾಟಿಸಿ, ಪರಿಶ್ರಮ ಮತ್ತು ಸಾಧನೆಯಿಂದಲೇ ಜೀವನದಲ್ಲಿ ಶ್ರೇಯಸ್ಸು ಸಾಧಿಸಲು ಸಾಧ್ಯ ಎಂದರು.

ಬಾಳೆಹೊನ್ನೂರು ಖಾಸಾ ಶಾಖಾ ಮಠದ ಶಿವಮೂರ್ತಿ ಶಿವಾಚಾರ್ಯರು, ಗದ್ದುಗೆಮಠದ ಚರಲಿಂಗ ಸ್ವಾಮಿಗಳು, ಶ್ರೀನಿವಾಸ ಸರಡಗಿಯ ಡಾ. ರೇವಣಸಿದ್ಧ ಶಿವಾಚಾರ್ಯರು ಗುರುಭಕ್ತಿ, ಯೋಗ ಮತ್ತು ಆಧ್ಯಾತ್ಮಿಕ ಜೀವನದ ಮಹತ್ವದ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಶಾಂತಕುಮಾರ ಬಲಗುಂದಿ, ನಾರಾಯಣ ಶಿಂಗಾಡೆ, ಶಿವಶರಣಪ್ಪ ಸಿರಿ, ಧರ್ಮಪ್ರಕಾಶ ಪಾಟೀಲ, ಡಾ. ಜಗನ್ನಾಥ ಬಿಜಾಪುರ, ಶಿವಶಂಕರ ಎಸ್. ಹೊಸಗೌಡ, ಸಂಗಣ್ಣ ಧೂಳಗುಂಡಿ, ಸಿದ್ರಾಮಪ್ಪ ಎಸ್. ಪಾಟೀಲ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ರೇಣುಕಾನಂದ ಚೌಧರಿ, ದೇವೀಂದ್ರಪ್ಪ ಹಾಲಪ್ಪಗೋಳ ಸೇರಿದಂತೆ ಸೇವಾ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು. ಗುರುಮೂರ್ತಿ ಶಿವಾಚಾರ್ಯರು ನಿರೂಪಿಸಿದರು. ವಿನೋದ ದುದಗಿ ಸ್ವಾಗತಿಸಿದರು. ನಂತರ ಸಂಗೀತ ಕಾರ್ಯಕ್ರಮ ಹಾಗೂ ಅನ್ನದಾಸೋಹ ನಡೆಯಿತು.

# ಕಲ್ಲಯ್ಯಜ್ಜನವರಿಗೆ ರಾಷ್ಟ್ರೀಯ ಜ್ಞಾನಗಂಗಾ ಗೌರವ



**ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ**

ಅಡ್ನೂರ-ರಾಜೂರ-ಗದಗ ಬ್ರಹನ್ಮಠದ ಲಿಂಗೈಕ್ಯ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿಗಳ ಸ್ಮರಣಾರ್ಥ-ರ್ಥ ಅಣ್ಣಿಗೇರಿಯ ಜ್ಞಾನಗಂಗಾ ಚಾ-ರಿಟೇಬಲ್ ಟ್ರಸ್ಟ್ ಸ್ಥಾಪಿಸಿರುವ ಪ್ರಥಮ ರಾಷ್ಟ್ರೀಯ ಜ್ಞಾನಗಂಗಾ ಪುರಸ್ಕಾರ-2026 ಅನ್ನು ಗದಗದ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಡಾ. ಕಲ್ಲಯ್ಯಜ್ಜನವರಿಗೆ ಪ್ರದಾನ ಮಾಡಲಾಯಿತು.

ವೀರೇಶ್ವರ ಪುಣ್ಯಾಶ್ರಮದ ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಸಮಾರಂಭದಲ್ಲಿ ಧಾರವಾಡ ಮುರುಘಾಮಠದ ಮಲ್ಲಿಕಾರ್ಜುನ ಸ್ವಾಮೀಜಿ, ಬಳಗಾನೂರು ಹಾಗೂ ಚಿಕ್ಕೇನಕೊಪ್ಪ ಶರಣಾದಿ ಪೂಜ್ಯರು ಕಲ್ಲಯ್ಯಜ್ಜನವರಿಗೆ ಪ್ರಶಸ್ತಿ ಪ್ರದಾನ ಮಾಡಿ ಅಭಿನಂದಿಸಿದರು.

ಸಾಹಿತ್ಯ, ಕಲೆ, ಸಂಸ್ಕೃತಿ ಹಾಗೂ ಸಮಾಜಸೇವೆ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದವರನ್ನು ಗೌರವಿಸುವ ಉದ್ದೇಶದಿಂದ ಈ ಪ್ರಶಸ್ತಿಯನ್ನು ಸ್ಥಾಪಿಸಲಾಗಿದೆ. ಸಮಾಜಸೇವೆ ಮತ್ತು ಕಲಾ ಕ್ಷೇತ್ರಕ್ಕೆ ನೀಡಿರುವ ಅಮೂಲ್ಯ ಕೊಡುಗೆಯನ್ನು ಪರಿಗಣಿಸಿ ಕಲ್ಲಯ್ಯಜ್ಜನವರನ್ನು ಪ್ರಥಮ ಪುರಸ್ಕಾರಕ್ಕೆ ಆಯ್ಕೆ ಮಾಡಲಾಗಿದೆ.

ಟ್ರಸ್ಟ್‌ನ ಕಾರ್ಯದರ್ಶಿ ಎಂ.ಎನ್. ಯಲಬುರ್ಗಿ ಬಿನ್ನವತ್ತಳೆ ವಾಚಿಸಿ, ಪ್ರಸ್ತುತ ಪ್ರಶಸ್ತಿಯನ್ನು ರೂ.5 ಸಾವಿರ ನಗದು ಸಹಿತ ಸಾಂಕೇತಿಕವಾಗಿ ಪ್ರದಾನಿಸಲಾಗಿದ್ದು, ಮುಂದಿನ ವರ್ಷಗಳಲ್ಲಿ ಪ್ರಶಸ್ತಿಯ ಮೊತ್ತವನ್ನು ಹಂತ ಹಂತವಾಗಿ ರೂ.10 ಲಕ್ಷದವರೆಗೆ ಹೆಚ್ಚಿಸುವ ಉದ್ದೇಶ ಟ್ರಸ್ಟ್ ಹೊಂದಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ಗೌರವಾಧ್ಯಕ್ಷ ಎಂ. ಕಲ್ಲಿನಾಥ ಶಾಸ್ತ್ರಿ, ಖಜಾಂಚಿ ಅರುಣ ಕರಿಶಂಕರಿ, ಉಪಾಧ್ಯಕ್ಷ ಚಂದ್ರಶೇಖರ ಸುರಕೋಡ, ನಿರ್ದೇಶಕರಾದ ವೀರೇಶ ಕಿತ್ತೂರ, ವೀರೇಶ ಶಾನುಭೋಗರ, ಬಿ.ಎಂ. ಕಲ್ಲನಗೌಡರ, ಕಿರಣ ಬೂದಿಹಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವೃತ್ತಿ ರಂಗಭೂಮಿಯ ಪರಂಪರೆ ಉಳಿಯಬೇಕು: ಕಲ್ಲಯ್ಯಜ್ಜನವರು



**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ರಂಗಪರಂಪರೆಗೆ ಅಪಾರ ಕೊಡುಗೆ ನೀಡಿರುವ ವೃತ್ತಿ ರಂಗಭೂಮಿಯ ಇತಿಹಾಸ, ಸಾಧನೆ ಹಾಗೂ ಮಹತ್ವವನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಭಾವಚಿತ್ರ ಮತ್ತು ಲೇಖನಗಳ ಪ್ರದರ್ಶನಗಳು ಅತ್ಯಂತ ಅಗತ್ಯ ಎಂದು ವೀರೇಶ್ವರ ಪುಣ್ಯಾಶ್ರಮದ ಪರಮಪೂಜ್ಯ ಕಲ್ಲಯ್ಯಜ್ಜನವರು ಹೇಳಿದರು.

ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಪಂಚಾಕ್ಷರಿ ಗವಾಯಿಗಳ ಪ್ರೌಢಶಾಲೆ ಆವರಣದಲ್ಲಿ ಚಿತ್ರಕಲಾವಿದ ಶಂಕರಗೌಡ ಪಾಟೀಲ ಆಯೋಜಿಸಿದ್ದ ವೃತ್ತಿ ರಂಗಭೂಮಿಯ ಭಾವಚಿತ್ರ ಹಾಗೂ ಲೇಖನಗಳ 84ನೇ ಪ್ರದರ್ಶನ ಉದ್ಘಾಟಿಸಿ ಅವರು ಮಾತನಾಡಿದರು.

ವೃತ್ತಿ ರಂಗಭೂಮಿ ಕನ್ನಡದ ಸಾಂಸ್ಕೃತಿಕ ಪರಂಪರೆಯ ಅಮೂಲ್ಯ ಸಂಪತ್ತಾಗಿದ್ದು, ಇಂತಹ ಪ್ರದರ್ಶನಗಳ ಮೂಲಕ ಅದರ ಇತಿಹಾಸ ಮತ್ತು ಸಾಧಕರ ಪರಿಚಯ ಜನರಿಗೆ ತಲುಪುತ್ತದೆ. ಯುವಜನರಲ್ಲಿ ರಂಗಭೂಮಿಯ ಬಗ್ಗೆ ಆಸಕ್ತಿ ಮತ್ತು ಜಾಗೃತಿ ಮೂಡಿಸಲು ಇಂತಹ ಪ್ರಯತ್ನಗಳು ಅತ್ಯಂತ ಉಪಯುಕ್ತವಾಗಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಲಾ ವಿಮರ್ಶಕ ಪ್ರೊ. ಅನ್ನದಾನಿ ಹಿರೇಮಠ, ಹಿರಿಯ ಪತ್ರಕರ್ತ ಅಜಿತ್ ಘೋಪಡೆ, ಕಲಾ ಇತಿಹಾಸ ಸಂಶೋಧಕ ಡಾ. ದತ್ತಪ್ರಸನ್ನ ಪಾಟೀಲ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಹಿರಿಯ ಪತ್ರಕರ್ತರಾದ ಗಣೇಶ ಅಮೀನಗಡ ಹಾಗೂ ಜಿ.ಪಿ. ಬಸವರಾಜು ವಿಶೇಷ ಆಹ್ವಾನಿತರಾಗಿ ಪ್ರದರ್ಶನ ವೀಕ್ಷಿಸಿ, ಚಿತ್ರಕಲಾವಿದ ಶಂಕರಗೌಡ ಪಾಟೀಲ ಅವರ ಅಪರೂಪದ ಸಂಗ್ರಹ ಮತ್ತು ವೃತ್ತಿ ರಂಗಭೂಮಿ ಉಳಿವಿನ ಪ್ರಯತ್ನವನ್ನು ಶ್ಲಾಘಿಸಿದರು.

# ಜಗಜೀವನ್ ರಾಮ್ ಸರ್ಕಲ್‌ಗೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಸಾಮಾಜಿಕ ನ್ಯಾಯದ ಹರಿಕಾರ, ರಾಷ್ಟ್ರನಾಯಕ ಡಾ. ಬಾಬು ಜಗಜೀವನ್ ರಾಮ್ ಅವರ 40ನೇ ಪುಣ್ಯಸ್ಮರಣೆಯ ಅಂಗವಾಗಿ ಪಟ್ಟಣದ ರಾಮನಗರದಲ್ಲಿ ಅವರ ಹೆಸರಿನ 'ಡಾ. ಬಾಬು ಜಗಜೀವನ್ ರಾಮ್ ಸರ್ಕಲ್' ನಾಮಫಲಕವನ್ನು ಶಾಸಕ ಕೆ. ನೇಮಿರಾಜ್ ನಾಯ್ಕ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಈ ಸ್ಥಳವನ್ನು ಹಿಂದೆ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಲ್ ಎಂದು ನಾಮಕರಣ ಮಾಡಲಾಗಿತ್ತು. ನಂತರ ಸ್ಥಳಾಂತರಗೊಂಡ ಹಿನ್ನೆಲೆಯಲ್ಲಿ ದಲಿತಪರ ಹಾಗೂ ಮಾದಿಗ ಸಂಘಟನೆಗಳ ಮನವಿಯ ಮೇರೆಗೆ ಈಗ ಡಾ. ಬಾಬು ಜಗಜೀವನ್ ರಾಮ್ ಸರ್ಕಲ್ ಎಂದು ಮರುನಾಮಕರಣ ಮಾಡಲಾಗಿದೆ ಎಂದು ತಿಳಿಸಿದರು.

ಸರ್ಕಲ್‌ಗೆ ಅಗತ್ಯವಿರುವ ಎಲ್ಲ ಮೂಲಸೌಕರ್ಯಗಳನ್ನು ಕಲ್ಪಿಸಲಾಗುವುದು. ಈ ಜಾಗ ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ಸೇರಿದ್ದು, ಅತಿಕ್ರಮಣ ತೆರವುಗೊಳಿಸಿ ದಲಿತಪರ ಸಂಘಟನೆಗಳ ಸಭೆ, ಚರ್ಚೆ ಹಾಗೂ ಸಾಮಾಜಿಕ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಸಭಾಂಗಣ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಗಣ್ಯರು ಮಾತನಾಡಿ, ಡಾ. ಬಾಬು ಜಗಜೀವನ್ ರಾಮ್ ಅವರು ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಶೋಷಿತ ಸಮುದಾಯಗಳ ಹಕ್ಕುಗಳಿಗಾಗಿ ಸಲ್ಲಿಸಿದ ಸೇವೆ ಸ್ಮರಣೀಯವಾಗಿದ್ದು, ಅವರ ಆದರ್ಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ದಲಿತಪರ ಸಂಘಟನೆಗಳ ಪದಾಧಿಕಾರಿಗಳು, ಡಾ. ಬಾಬು ಜಗಜೀವನ್ ರಾಮ್ ಸರ್ಕಲ್ ಸಮಿತಿ ಸದಸ್ಯರು, ಸಮಾಜದ ಹಿರಿಯರು, ಯುವಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಾಷ್ಟ್ರನಾಯಕನಿಗೆ ಗೌರವ ನಮನ ಸಲ್ಲಿಸಿದರು.

# ವಿದ್ಯಾರ್ಥಿ ಜೀವನದಲ್ಲಿ ಉತ್ತಮ ಅಭ್ಯಾಸ ಬೆಳೆಸಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ವಿದ್ಯಾರ್ಥಿ ಜೀವನದಲ್ಲಿ ದುಶ್ಚಟಗಳಿಗೆ ಬಲಿಯಾಗದೆ, ಸತತ ಅಭ್ಯಾಸ ಮತ್ತು ಉತ್ತಮ ಸಂಸ್ಕಾರಗಳನ್ನು ರೂಢಿಸಿಕೊಳ್ಳುವುದರಿಂದ ಉಜ್ವಲ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂದು ಪ್ರಕಾಶ ಮದ್ದಿನ ಹೇಳಿದರು.

ಪಟ್ಟಣ ಸಮೀಪದ ಯಲಿಶಿರುಂದ ಗ್ರಾಮದ ದಂಡವ್ವ ಯಲಿ ಸರ್ಕಾರಿ ಪ್ರೌಢಶಾಲೆಯಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ಬಿಸಿ ಟ್ರಸ್ಟ್), ಶಿರಹಟ್ಟಿ ವತಿಯಿಂದ ಹಮ್ಮಿಕೊಂಡಿದ್ದ 'ಸ್ವಾಸ್ಥ್ಯ ಸಂಕಲ್ಪ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಮದ್ಯಪಾನ ಸೇರಿದಂತೆ ವಿವಿಧ ದುಶ್ಚಟಗಳಿಂದ ಜನರನ್ನು ಮುಕ್ತಗೊಳಿಸಲು ರಾಜ್ಯಾದ್ಯಂತ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಇಂದಿನ ವಿದ್ಯಾರ್ಥಿಗಳೇ ನಾಳಿನ ಉತ್ತಮ ಪ್ರಜೆಗಳಾಗಿರುವುದರಿಂದ ದುಶ್ಚಟ ಮತ್ತು ದುರಾಭ್ಯಾಸಗಳಿಂದ ದೂರವಿದ್ದು, ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು. ಇದರಿಂದ ಉತ್ತಮ ವ್ಯಕ್ತಿತ್ವದ ಜೊತೆಗೆ ಆರೋಗ್ಯವಂತ ಸಮಾಜ ನಿರ್ಮಾಣಕ್ಕೂ ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಪ್ರಧಾನ ಗುರುಮಾತೆ ರಾಧಾ ಜಾಲರೆಡ್ಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೇಲ್ವಿಚಾರಕಿ ಶಾಂತಾ ಬೆನಕಣ್ಣವರ, ಜಗದೀಶ ದಿನ್ನಿ, ಸಿ.ಎಫ್. ಜೋಗಿನ, ಮಹಾಂತೇಶ ಪೂಜೇರಿ, ಬಿ.ಎಸ್. ಲಮಾಣಿ, ಎಸ್. ಎಚ್. ಕೊತಬಾಳ, ಶ್ರೀಧರ ತಳವಾರ, ಜ್ಯೋತಿ ಪೂಜಾರ, ಸೇವಾ ಪ್ರತಿನಿಧಿ ಜಯಶ್ರೀ ಯಲಿ ಹಾಗೂ ಲಲಿತಾ ನಡುವಿನಮನಿ ಉಪಸ್ಥಿತರಿದ್ದರು.

# ವ್ಯಾಪಾರಸ್ಥರ ಸಮಸ್ಯೆಗೆ ವಾಣಿಜ್ಯೋದ್ಯಮ ಸಂಸ್ಥೆ ಭರವಸೆ



**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಜಿಎಸ್‌ಟಿ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳು ಹಲವು ವರ್ಷಗಳ ಹಿಂದಿನ ವ್ಯವಹಾರಗಳಿಗೆ ಸಂಬಂಧಿಸಿದಂತೆ ನೀಡುತ್ತಿರುವ ನೋಟಿಸ್‌ಗಳಿಂದ ವ್ಯಾಪಾರಸ್ಥರು ಸಂಕಷ್ಟಕ್ಕೆ ಸಿಲುಕಿದ್ದು, ಇಂತಹ ಪ್ರಕರಣಗಳಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಅಗತ್ಯ ನೆರವು ನೀಡಲಿದೆ ಎಂದು ಸಂಸ್ಥೆಯ ಅಧ್ಯಕ್ಷ ಪವನ್ ಚೋಪ್ರಾ ಭರವಸೆ ನೀಡಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಹಾಗೂ ಮುಂಡರಗಿ ವ್ಯಾಪಾರಸ್ಥರ ಸಂಘದ ಸಂಯುಕ್ತ ಆಶ್ರಯದಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಸಭೆಯಲ್ಲಿ ವ್ಯಾಪಾರಸ್ಥರು ಜಿಎಸ್‌ಟಿ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳು 5ರಿಂದ 6 ವರ್ಷಗಳ ಹಿಂದಿನ ವ್ಯವಹಾರಗಳಿಗೆ ಸಂಬಂಧಿಸಿದಂತೆ ನೋಟಿಸ್ ನೀಡುತ್ತಿರುವುದರಿಂದ ವ್ಯಾಪಾರ ವಹಿವಾಟಿಗೆ ತೊಂದರೆಯಾಗುತ್ತಿದೆ ಎಂದು ಗಮನ ಸೆಳೆದರು.

ಇದಕ್ಕೆ ಪ್ರತಿಕ್ರಿಯಿಸಿದ ಪವನ್ ಚೋಪ್ರಾ, ಇಂತಹ ಪ್ರಕರಣಗಳಲ್ಲಿ ವ್ಯಾಪಾರಸ್ಥರು ಸಂಸ್ಥೆಯನ್ನು ಸಂಪರ್ಕಿಸಿದರೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿ, ನ್ಯಾಯಸಮ್ಮತವಾಗಿರುವ ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಮುಂಡರಗಿ ಭಾಗದಲ್ಲಿ ಯಾವುದೇ ಪ್ರಮುಖ ಕೈಗಾರಿಕೆಗಳಿಲ್ಲದ ಕಾರಣ ಹೊಸ ಕೈಗಾರಿಕಾ ಪ್ರದೇಶ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಸಭೆಯಲ್ಲಿ ಒತ್ತಾಯಿಸಲಾಯಿತು. ರೈತರು ಗೋವಿನಜೋಳ ಸೇರಿದಂತೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ವ್ಯಾಪ್ತಿಯ ಕೃಷಿ ಉತ್ಪನ್ನಗಳನ್ನು ಎಪಿಎಂಸಿ ಮಾರುಕಟ್ಟೆಯಲ್ಲಿಯೇ ಮಾರಾಟ ಮಾಡಿದರೆ ಸರ್ಕಾರದ ಪ್ರೋತ್ಸಾಹಧನದ ಲಾಭ ದೊರೆಯುವುದರ ಜೊತೆಗೆ ರೈತರು ಮತ್ತು ವ್ಯಾಪಾರಸ್ಥರ ನಡುವೆ ಉತ್ತಮ ಬಾಂಧವ್ಯ ಬೆಳೆಯಲಿದೆ ಎಂದು ಅಭಿಪ್ರಾಯ ವ್ಯಕ್ತವಾಯಿತು.

ಸಭೆಯಲ್ಲಿ ಉನ್ನತ ಶಿಕ್ಷಣ ಪೂರ್ಣಗೊಳಿಸಿ ಚಾರ್ಟರ್ಡ್ ಅಕೌಂಟೆಂಟ್ (ಸಿಎ) ಆಗಿ ಸಾಧನೆ ಮಾಡಿದ ವ್ಯಾಪಾರಸ್ಥರ ಮಕ್ಕಳನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಇದೇ ವೇಳೆ ಮುಂಡರಗಿಯ ವರ್ತಕರಾದ ಗಿರೀಶ್ ಹಾವನಾಳ, ಕೊಟ್ರೇಶ್ ಸೇರಿದಂತೆ ಗಣ್ಯರನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ವತಿಯಿಂದ ಗೌರವಿಸಲಾಯಿತು.

# ಶಿಕ್ಷಕಿ ಸಾವಿತ್ರಿ ಜಂತ್ಲಿಗೆ ಭಾವಪೂರ್ಣ ಬೀಳ್ಕೊಡುಗೆ



**ವಿಜಯಸಾಕ್ಷಿ ಸುದ್ದಿ, ಗದಗ**

ವೃತ್ತಿಯಿಂದ ನಿವೃತ್ತಿಯಾಗುವುದು ಕೆಲಸದ ಅಂತ್ಯವಲ್ಲ. ಅದು ಅನುಭವ ಮತ್ತು ಜ್ಞಾನದೊಂದಿಗೆ ಹೊಸ ಬದುಕು ಆರಂಭಿಸುವ ಮಹತ್ವದ ಘಟ್ಟವಾಗಿದೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು. ಬೆಟಗೇರಿಯ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಪ್ರಾಥಮಿಕ ಶಾಲೆಯಲ್ಲಿ ನಿವೃತ್ತ ಶಿಕ್ಷಕಿ ಸಾವಿತ್ರಿ ಜಂತ್ಲಿ ಅವರಿಗೆ ಆಯೋಜಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ನಿವೃತ್ತ ಶಿಕ್ಷಕರು ತಮ್ಮ ಅಪಾರ ಅನುಭವವನ್ನು ಸಮಾಜದ ಒಳಿತಿಗೆ ಬಳಸಬೇಕು. ತಾವು ಸೇವೆ ಸಲ್ಲಿಸಿದ ಶಾಲೆಗಳಿಗೆ ಆಗಾಗ್ಗೆ ಭೇಟಿ ನೀಡಿ ವಿದ್ಯಾರ್ಥಿಗಳು ಹಾಗೂ ಶಿಕ್ಷಕರಿಗೆ ಮಾರ್ಗದರ್ಶನ ನೀಡುವ ಮೂಲಕ ಶಿಕ್ಷಣ ಕ್ಷೇತ್ರಕ್ಕೆ ತಮ್ಮ ಕೊಡುಗೆಯನ್ನು ಮುಂದುವರಿಸಬೇಕು ಎಂದು ಸಲಹೆ ನೀಡಿದರು.

ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿ ಸುಮಾ ಹಚಡದ ಪ್ರಾಸ್ತಾವಿಕವಾಗಿ ಮಾತನಾಡಿ, ಸಾವಿತ್ರಿ ಜಂತ್ಲಿ ಅವರು ತಮ್ಮ ಸೇವಾವಧಿಯಲ್ಲಿ ಆತ್ಮೀಯತೆ, ಶಿಸ್ತು ಮತ್ತು ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಿ ಎಲ್ಲರ ಗೌರವಕ್ಕೆ ಪಾತ್ರರಾಗಿದ್ದಾರೆ ಎಂದು ಹೇಳಿದರು.

ಎಸ್.ಐ. ಮಡಿವಾಳರ ಹಾಗೂ ಎಸ್. ವೈ. ಶಿವಬಸಣ್ಣವರ ಪ್ರಾರ್ಥಿಸಿದರು. ಪಿ.ಎಸ್. ಮೆಣಸಗಿ ಸ್ವಾಗತಿಸಿದರು. ಎಂ.ಆರ್. ಮುಕ್ಕಾಲುಮಠ ಪರಿಚಯಿಸಿದರು. ಸಿ.ಬಿ. ಅಂಗಡಿ ಕಾರ್ಯಕ್ರಮ ನಿರೂಪಿಸಿದರು. ಜೆ.ಎಚ್. ಜಿನಗಿ ವಂದಿಸಿದರು.

ಈ ಸಂದರ್ಭದಲ್ಲಿ ಡಿ.ವಿ. ಮುಳಗುಂದ, ಐ.ಎಸ್. ಹೂಗಾರ, ಎ.ಎನ್. ದೇವಾಂಗಮಠ, ಜೆ.ಎಚ್. ದೊಡ್ಡಮನಿ, ಪಿ.ಪಿ. ಡಂಬರ, ಎಸ್.ಎಂ. ಸುಗಂದಿ ಸೇರಿದಂತೆ ಶಿಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ನಿಸ್ವಾರ್ಥ ಸೇವೆ, ಜನಪರ ಕಾಳಜಿ ಮತ್ತು ಅಭಿವೃದ್ಧಿ ಕಾರ್ಯಗಳು ಇತರರಿಗೆ ಮಾದರಿ



**ವಿಜಯಸಾಕ್ಷಿ ಸುದ್ದಿ, ಯಲಬುರ್ಗಾ**

ಮುಖಂಡರೊಬ್ಬರ ಸಾಮಾಜಿಕ ಕಾರ್ಯವು ಸಮಾಜದ ಏಳಿಗೆಗೆ ಮತ್ತು ಜನಸಾಮಾನ್ಯರ ಕಷ್ಟಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಅತ್ಯಂತ ಮಹತ್ವದ್ದಾಗಿರುತ್ತದೆ. ಅವರ ನಿಸ್ವಾರ್ಥ ಸೇವೆ, ಜನಪರ ಕಾಳಜಿ ಮತ್ತು ಅಭಿವೃದ್ಧಿ ಕಾರ್ಯಗಳು ಇತರರಿಗೆ ಮಾದರಿಯಾಗಿರುತ್ತವೆ ಎಂದು ಯುವ ಮುಖಂಡ ಹಾಗೂ ಸಮಾಜ ಸೇವಕ ಶಿವಾನಂದ ಬಣಕಾರ ಹೇಳಿದರು. ಪಟ್ಟಣದ ಉಳ್ಳಾಗಡ್ಡಿ ಬ್ರದರ್ಸ್ ಕಾರ್ಯಾಲಯದಲ್ಲಿ ತಾಲೂಕಿನ ವಿವಿಧ ಗ್ರಾಮಗಳ ಅವರ ಅಭಿಮಾನಿಗಳು ಹಮ್ಮಿಕೊಂಡ ಜನ್ಮದಿನಕ್ಕೆ ಶುಭಾಶಯ ಕೋರಿ ಮಾತನಾಡಿದ ಅವರು, ಸನ್ನಿಧಿ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಮೂಲಕ ಹಲವಾರು ಸಾಮಾಜಿಕ, ಶೈಕ್ಷಣಿಕ ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಅತ್ಯುತ್ತಮ ಸಮಾಜಮುಖಿ ಕಾರ್ಯಗಳು ಶ್ಲಾಘನೀಯ ಎಂದು ಬಣ್ಣಿಸಿದರು. ತಾಲೂಕಿನಲ್ಲಿ ಅವರ ತಂದೆ ದಿ.ಅಂದಾನಗೌಡ ಉಳ್ಳಾಗಡ್ಡಿ ಹಾಗೂ ಚಿಕ್ಕಪ್ಪ ದಿ.ಬಸವರಾಜ್ ಉಳ್ಳಾಗಡ್ಡಿ ಅವರು ಅನೇಕ ರಾಜಕೀಯ, ಧಾರ್ಮಿಕ ಹಾಗೂ ಸಾಮಾಜಿಕ, ಶೈಕ್ಷಣಿಕ ಕಾರ್ಯಕ್ರಮಗಳನ್ನು ಇವರು ಮುಂದುವರೆಸಿಕೊಂಡು ಬಂದಿದ್ದಾರೆ. ಆನಂದಗೌಡ ಉಳ್ಳಾಗಡ್ಡಿ ರವರು ಮುಂದಿನ ದಿನಗಳಲ್ಲಿ ಮುಂಬರುವ ಜಿಪಂ ಚುನಾವಣೆಯಲ್ಲಿ ಅವರ ಅಭಿಮಾನಿಗಳು, ಮತದಾರರು ಆಶೀರ್ವದಿಸಿ ಗೆಲುವು ಸಾಧಿಸುವ ಮೂಲಕ ಜಿಪಂ ಅಧ್ಯಕ್ಷರಾಗಿ, ಈ ಭಾಗದಲ್ಲಿ ಹೆಚ್ಚು ಹೆಚ್ಚು ಸಾಮಾಜಿಕ ಕಾರ್ಯ ನಿರ್ವಹಿಸಲಿ ಎಂದು ಹೇಳಿದರು. ಜನ್ಮದಿನ ಕಾರ್ಯಕ್ರಮದಲ್ಲಿ ತಾಲೂಕ ವಕೀಲರ ಸಂಘ, ವಿವಿಧ ರಾಜಕೀಯ ಪಕ್ಷಗಳ ಕಾರ್ಯಕರ್ತರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಮಾಧ್ಯಮ ಮಿತ್ರರು, ವಿಶೇಷವಾಗಿ ಮುಧೋಳ ಹಾಗೂ ಚಿಕ್ಕಮ್ಯಾಗೇರಿ ಜಿಪಂ ಕ್ಷೇತ್ರದ ಹಾಗೂ ವಿವಿಧ ಗ್ರಾಮಗಳ ಗ್ರಾಮಸ್ಥರು, ಆಗಮಿಸಿ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಸಿ.ಪಿ.ಪಾಟೀಲ್, ಭತ್ತಪ್ಪ ಮುಧೋಳ್, ವೀರೇಂದ್ರ ಇಟಗಿ, ಹೇಮಣ್ಣ ಪೂಜಾರ, ಗವಿಸಿದ್ದಪ್ಪ ಮಾನಶೆಟ್ಟರ, ವೆಂಕಟೇಶ್ ಜೋಶಿ, ಸಂಗಪ್ಪ ತುಮ್ಮರಗುದ್ದಿ, ಲಿಂಗರಾಜ್ ಪಾಟೀಲ್, ಮಲ್ಲಪ್ಪ ಹಣಗಿ, ಯಲ್ಲಪ್ಪ ಹಂದ್ರಾಳ, ಹಸನಸಾಬ್ ನದಾಫ್, ಎಚ್.ಡಿ.ಕಮ್ಮಾರ, ದಾದುಸಾಬ್ ಯಲಿಗಾರ, ಅಂಬರೀಷ್ ಹುಬ್ಬಳ್ಳಿ ಸೇರಿದಂತೆ ಇತರರು ಇದ್ದರು.

# ಒಂದೇ ಆವರಣದಲ್ಲಿ ದರ್ಗಾ-ದೇಗುಲ ಸಾಮರಸ್ಯದ ಪ್ರತೀಕ: ಎಚ್.ಕೆ. ಪಾಟೀಲ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಾರ್ಡ್ ಸಂಖ್ಯೆ ೨೦ರ ಈಟಿ ಓಣಿಯಲ್ಲಿರುವ ಹಜರತ್ ಮಹಬೂಬ ಸುಬಾನಿ ದರ್ಗಾ ಹಾಗೂ ತಾಯಮ್ಮ ದೇವಸ್ಥಾನದ ನೂತನ ಕಟ್ಟಡವನ್ನು ಮಾಜಿ ಸಚಿವರು ಹಾಗೂ ಗದಗ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಕೆ. ಪಾಟೀಲ ಅವರು ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರಸಭೆ ಸದಸ್ಯರು ಹಾಗೂ ಗದಗ ಜಿಲ್ಲಾ ಯೋಜನಾ ಸಮಿತಿ ಸದಸ್ಯರಾದ ಶ್ರೀಮತಿ ಪರವೀನ್‌ಬಾನು ಅಬ್ದುಲ್ ಮುನಾಫ್ ಮುಲ್ಲಾ ಅವರು ವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಎಚ್. ಕೆ. ಪಾಟೀಲ ಅವರು, ದರ್ಗಾ ಹಾಗೂ ದೇವಸ್ಥಾನ ಒಂದೇ ಆವರಣದಲ್ಲಿ ಅಭಿವೃದ್ಧಿಗೊಂಡಿರುವುದು ಸರ್ವಧರ್ಮ ಸಾಮರಸ್ಯದ ಪ್ರತೀಕವಾಗಿದ್ದು, ಇಂತಹ ಧಾರ್ಮಿಕ ಕೇಂದ್ರಗಳ ಅಭಿವೃದ್ಧಿಯು ಸಮಾಜದಲ್ಲಿ ಶಾಂತಿ, ಸಹಬಾಳ್ವೆ ಮತ್ತು ಸಹೋದರತೆಯ ಭಾವನೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಹೇಳಿದರು. ಉದ್ಘಾಟನಾ ಸಮಾರಂಭದ ಬಳಿಕ ನೂತನ ಕಟ್ಟಡವನ್ನು ವೀಕ್ಷಿಸಲು ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾದ ಕೃಷ್ಣೇಗೌಡ ಪಾಟೀಲ, ಹಿರಿಯ ಮುಖಂಡರಾದ ಫಕೀರಪ್ಪ ಹೆಬಸೂರ ಹಾಗೂ ಗಣ್ಯ ಉದ್ಯಮಿ ವಿಜಯಕುಮಾರ್ ಗಡ್ಡಿ ಅವರು ಆಗಮಿಸಿದರು. ಅವರು ನೂತನ ಕಟ್ಟಡದ ನಿರ್ಮಾಣ ಕಾರ್ಯವನ್ನು ಮೆಚ್ಚುಗೆ ವ್ಯಕ್ತಪಡಿಸಿ, ಧಾರ್ಮಿಕ ಸಾಮರಸ್ಯ ಮತ್ತು ಸಾಮಾಜಿಕ ಸೌಹಾರ್ದತೆಯನ್ನು ಬಿಂಬಿಸುವ ಈ ಕಾರ್ಯ ಶ್ಲಾಘನೀಯವಾಗಿದೆ ಎಂದು ಅಭಿಪ್ರಾಯಪಟ್ಟರು. ಬಳಿಕ ವಾರ್ಡ್ ನಿವಾಸಿಗಳ ಪರವಾಗಿ ಆಗಮಿಸಿದ ಗಣ್ಯರನ್ನು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು. ದರ್ಗಾದಲ್ಲಿ ವಿಶೇಷ ಪ್ರಾರ್ಥನೆ ಹಾಗೂ ದೇವಸ್ಥಾನದಲ್ಲಿ ವಿಶೇಷ ಪೂಜೆಗಳು ನೆರವೇರಿದ ಬಳಿಕ ಭಕ್ತರಿಗೆ ಪ್ರಸಾದ ಮತ್ತು ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

# ಡಾ.ರಾಜ್‌ಕುಮಾರ ಗ್ರಂಥ ಬಿಡುಗಡೆಯ ೨೦ನೇ ವರ್ಷಾಚರಣೆ ನಾಳೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ವರನಟ, ನಟಸಾರ್ವಭೌಮ, ಡಾ. ರಾಜಕುಮಾರ ಅವರು ೨೦೦೬ ರಲ್ಲಿ ನಿಧನರಾದಾಗ ಅವರನ್ನು ಕುರಿತು ಕಬ್ಬಿಗರ ಕೂಟ ಮತ್ತು ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ರಾಜ್ಯಮಟ್ಟದ ಕವನ ಸಂಕಲನ 'ಅಣ್ಣ' ಎಂಬ ಹೆಸರಿನ ಕೃತಿಯನ್ನು ಪ್ರಕಟಿಸಲಾಗಿತ್ತು. ಇದನ್ನು ಬೆಂಗಳೂರಿನ ಡಾ. ರಾಜಕುಮಾರ ಅವರ ನಿವಾಸದಲ್ಲಿ ಜು.೯ರಂದು ಪುನೀತ ರಾಜಕುಮಾರ ಮತ್ತು ಪಾರ್ವತಮ್ಮ ರಾಜಕುಮಾರ ಅವರು ಲೋಕಾರ್ಪಣೆ ಮಾಡಿದ್ದರು. ಈಗ ಈ ಕಾರ್ಯಕ್ರಮ ನಡೆದು ೨೦ ವರ್ಷಗಳು ಪೂರ್ಣಗೊಂಡಿದ್ದು ಅಂದು ಕೃತಿ ಬಿಡುಗಡೆಗೆ ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಗದುಗಿನ ೩೦ ಕವಿಗಳ ತಂಡ ಭಾಗವಹಿಸಿತ್ತು. ಈ ಕಾರ್ಯಕ್ರಮದ ೨೦ನೇ ಸವಿನೆಪಿನ ವರ್ಷಾಚರಣೆಯನ್ನು ಜು. ೯ರಂದು ಸಂಜೆ ೫ ಗಂಟೆಗೆ ಕಬ್ಬಿಗರ ಕೂಟದ ಸಾಹಿತ್ಯ ಭವನದಲ್ಲಿ ಏರ್ಪಡಿಸಲಾಗಿದೆ. ಅಂದು ಪುಸ್ತಕ ಬಿಡುಗಡೆ ಮಾಡಿದ್ದ ಪುನೀತ್ ರಾಜಕುಮಾರ ಮತ್ತು ಪಾರ್ವತಮ್ಮ ರಾಜಕುಮಾರ ಈಗ ಕೇವಲ ನೆನಪಾಗಿ ಉಳಿದಿದ್ದಾರೆ. ಈ ಭಾವಪೂರ್ಣ ಕಾರ್ಯಕ್ರಮದಲ್ಲಿ ಡಾ. ರಾಜ್ ಭಾವಚಿತ್ರಕ್ಕೆ ಪುಷ್ಪನಮನ ಮತ್ತು 'ಅಣ್ಣ' ಕೃತಿಯ ವಿಮರ್ಶೆ ಏರ್ಪಡಿಸಲಾಗಿದೆ. ಆಸಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಲು ಕಬ್ಬಿಗರ ಕೂಟದ ಪ್ರಕಟಣೆ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka